ಸಂಪುಟ : 10 ಸಂಚಿಕೆ: 298 ಪುಟ : 4+2 ಬೆಲೆ: 3.00 ರವಿವಾರ ಜನವರಿ 11 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 298 Pages : 4+2 Price : 3.00 Sunday January 11 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶ್ರೀ ಜಲಾಶಂಕರರದಲ್ಲಿ ಜ.14ರಂದು ಜಾತ್ರಾ ಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ ಜಲಾಶಂಕರ ಕ್ಷೇತ್ರದಲ್ಲಿ ಜಾತ್ರಾ ಮಹೋತ್ಸವದ ನಿಮಿತ್ತ ಜ.14ರಂದು ಬೆಳಿಗ್ಗೆ 10 ಗಂಟೆಗೆ ಶ್ರೀದೇವರಿಗೆ ಹಾಗೂ ಪಾಂಡುರಂಗ ರುಕ್ಮಾಯಿ ಜ್ಞಾನದೇವ ತುಕಾರಾಮ್‌ರ ಮೂರ್ತಿಗೆ ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಷೋಡಶೋಪಚಾರ, ಮಹಾಮಂಗಳಾರತಿ, ಮಧ್ಯಾಹ್ನ 12 ಗಂಟೆಗೆ ಧರ್ಮಸಭೆ ಜರುಗಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶಿವಶರಣೆ ಮಾತೋಶ್ರೀ ರುದ್ರಮ್ಮತಾಯಿ ಈರಮ್ಮತಾಯಿ ಆಶ್ರಮ ಸಂಭಾಪೂರ ವಹಿಸಲಿದ್ದು, ದಿವ್ಯ ನೇತೃತ್ವವನ್ನು ವೇ. ಮೂ. ಬಸಯ್ಯಸ್ವಾಮಿ ವೀರಯ್ಯ ಹಿರೇಮಠ, ವೇ.ಮೂ. ಶಂಭುಲಿಂಗಯ್ಯ ವೀ.ಕಲ್ಮಠ, ಜಗದೇವಯ್ಯ ಚನ್ನವೀರಯ್ಯ ನರೇಗಲ್ಲಮಠ ಗುರುಗಳು ವಹಿಸುವರು. ಜಲಾಶಂಕರ ಟ್ರಸ್ಟ್ ಕಮಿಟಿಯ ಅಧ್ಯಕ್ಷರಾದ ಗಣೇಶ ಪಾಂಡಪ್ಪ ಲಮಾಣಿ ಹಾಗೂ ಸರ್ವ ಸದಸ್ಯರು, ಪರಮಪೂಜ್ಯ ಶ್ರೀ ವಿಷ್ಣುಸ್ವಾಮೀಜಿ ಶ್ರೀ ಶಂಭುಲಿಂಗ ಗೋಳಿಮಹಾರಾಜ ತಂಗಡಗಿ, ಜಲಾಶಂಕರ ದೇವಸ್ಥಾನದ ಅರ್ಚಕರಾದ ವೇ. ಮೂ. ಮಲ್ಲಯ್ಯಸ್ವಾಮಿ ಅಂಗಡಿ (ಹಿರೇಮಠ) ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಮೆಕ್ಕೆಜೋಳ ಬೆಳೆದ ರೈತರ ಗೊಂದಲ ನಿವಾರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಮೆಕ್ಕೆಜೋಳ ಎಂಎಸ್‌ಪಿ ಅಡಿಯಲ್ಲಿ ಖರೀದಿ ಪ್ರಾರಂಭಿಸಲು ಸರ್ಕಾರ ಆದೇಶ ಹೊರಡಿಸಿ ಟಿಎಪಿಎಂಎಸ್ ಮೂಲಕ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಿತ್ತು. ಈ ನಡುವೆ ಏಕಾಏಕಿ ಅದನ್ನು ಪೂರ್ಣಗೊಳಿಸದೇ ಮಾರುಕಟ್ಟೆ ಮಧ್ಯಪ್ರವೇಶ ದರ ಅಡಿಯಲ್ಲಿ ನೊಂದಣಿ ಪ್ರಾರಂಭಿಸಿದೆ. ಹೀಗಾದರೆ ಈಗಾಗಲೇ ಎಂಎಸ್‌ಪಿ ಅಡಿಯಲ್ಲಿ ನೋಂದಾಯಿಸಿಕೊಂಡ ರೈತರ ಗತಿಯೇನು ಎಂದು ಟಿಎಪಿಸಿಎಂಎಸ್‌ನ ತಾಲೂಕಾಧ್ಯಕ್ಷ ಸೋಮಣ್ಣ ಉಪನಾಳ ಪ್ರಶ್ನಿಸಿದ್ದಾರೆ.

ಅವರು ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿ, ಎಂಎಸ್‌ಪಿ ಅಡಿಯಲ್ಲಿ ನೋಂದಾಯಿಸಿಕೊಂಡ ಅಂದಾಜು ಶೇ. 70ಕ್ಕೂ ಅಧಿಕ ರೈತರ ಡಿಲೆವರಿ ಬಾಕಿ ಇದೆ. ಪ್ರಥಮ ಆದ್ಯತೆಯ ಮೇರೆಗೆ ಬಾಕಿಯಿರುವ ರೈತರ ಡಿಲೆವರಿಯನ್ನು ಪಡೆಯಲು ಸರ್ಕಾರ ಶೀಘ್ರವಾಗಿ ಕ್ರಮ ವಹಿಸಬೇಕು. ಇದರೊಂದಿಗೆ ತರಾತುರಿಯಲ್ಲಿ ನೋಂದಣಿಗಾಗಿ ಸೃಷ್ಟಿಸಿದ ತಂತ್ರಾಂಶ ಸಂಪೂರ್ಣ ಅವೈಜ್ಞಾನಿಕವಾಗಿದೆ.

ಈ ಎಲ್ಲ ಲೋಪದೋಷಗಳನ್ನು ಸರಿಪಡಿಸಿಕೊಂಡು ಸಂಪೂರ್ಣ ವೈಜ್ಞಾನಿಕವಾಗಿ ಪ್ರಕ್ರಿಯೆಗೆ ಅಣಿಯಾಗಿ ಕಡಲೆ, ಕುಸುಬಿ, ಬಿಳಿಜೋಳ ಮುಂತಾದವುಗಳಿಗೆ ಬೆಂಬಲ ಬೆಲೆ ಅಡಿಯಲ್ಲಿ ಪ್ರಕ್ರಿಯೆ ನೋಂದಣಿಗೆ ಚಾಲನೆ ನೀಡಿ ರೈತ ಕುಲಕ್ಕೆ ಒಳಿತನ್ನು ಮಾಡಬೇಕು ಎಂದು ಆಗ್ರಹಿಸಿದ್ದಾರೆ.

### 101 ದೇವಸ್ಥಾನಗಳ ಊರಲ್ಲಿ ಪುರಾತನ ನಿಧಿ, ಚಿನ್ನದ ಗಣಿ ನೋಡಲು ಮುಗಿಬಿದ್ದ ಜನ!

# ಲಕ್ಕುಂಡಿಯಲ್ಲಿ ಅಚ್ಚರಿ ಘಟನೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗದಗ ಜಿಲ್ಲೆಯ ಐತಿಹಾಸಿಕ ಲಕ್ಕುಂಡಿ ಗ್ರಾಮವು ಶನಿವಾರ ಮಧ್ಯಾಹ್ನ ಅಚ್ಚರಿ ಮೂಡಿಸುವ ವಿದ್ಯಮಾನವೊಂದಕ್ಕೆ ಸಾಕ್ಷಿಯಾಗಿದೆ. ಹಳೆಯ ಮನೆಯ ಅಡಿಪಾಯ ತೋಡುವ ಸಂದರ್ಭದಲ್ಲಿ ಅಪಾರ ಪ್ರಮಾಣದ ಪುರಾತನ ಚಿನ್ನಾಭರಣಗಳಿರುವ ಲೋಹದ ಚೊಂಬು ಪತ್ತೆಯಾಗಿದ್ದು, ಗ್ರಾಮದಲ್ಲಿ ಸಂಚಲನ ಮೂಡಿಸಿದೆ.

ಗದಗ ತಾಲೂಕಿನ ಲಕ್ಕುಂಡಿ ಗ್ರಾಮದ ಕಸ್ತೂರೆವ್ವ ರಿತ್ತಿ ಅವರು ಹೊಸ ಮನೆಯ ನಿರ್ಮಾಣಕ್ಕಾಗಿ ಅಡಿಪಾಯ ತೋಡುತ್ತಿದ್ದಾಗ ಕಾರ್ಮಿಕರಿಗೆ ಲೋಹದ ಚೊಂಬು ಸಿಕ್ಕಿದೆ. ಪರಿಶೀಲನೆ ನಡೆಸಿದಾಗ ಅದರೊಳಗೆ ಚಿನ್ನದ ಚೈನ್, ಬೆಲೆಬಾಳುವ ಬಳೆಗಳು ಹಾಗೂ ವಿವಿಧ ವಿನ್ಯಾಸದ ಉಂಗುರಗಳು ಪತ್ತೆಯಾಗಿವೆ.

ನಿಧಿ ಸಿಕ್ಕ ಮನೆಗೆ ಹೊಂದಿಕೊಂಡಂತೆ ಪುರಾತನ ಲಕ್ಷ್ಮೀ ದೇವಸ್ಥಾನ ಇರುವುದರಿಂದ, ಸದರಿ ಚಿನ್ನಾಭರಣಗಳು ದೇವಸ್ಥಾನಕ್ಕೆ ಸೇರಿದ





ಪುರಾತನ ಒಡವೆಗಳಾಗಿರಬಹುದೆಂಬ ಸಂಶಯ ವ್ಯಕ್ತವಾಗಿದೆ. ಕಲ್ಯಾಣ ಚಾಲುಕ್ಯರ ಕಾಲದ ಐತಿಹಾಸಿಕ ಹಿನ್ನೆಲೆ ಹೊಂದಿರುವ ಲಕ್ಕುಂಡಿಯಲ್ಲಿ ಮತ್ತೆ ನಿಧಿ ಪತ್ತೆಯಾಗಿರುವುದು ಇತಿಹಾಸಾಸಕ್ತರಲ್ಲಿ ಕುತೂಹಲ ಹೆಚ್ಚಿಸಿದೆ.

ವಿಷಯ ತಿಳಿಯುತ್ತಿದ್ದಂತೆ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆಭರಣಗಳ ಕಾಲಮಾನ ಮತ್ತು ಮೌಲ್ಯ ನಿಗದಿಗಾಗಿ ಸಂಶೋಧನೆ ಕೈಗೊಳ್ಳಲಾಗುತ್ತಿದ್ದು, ಜಿಲ್ಲಾಡಳಿತ ಸ್ಥಳವನ್ನು ವಶಕ್ಕೆ ಪಡೆದು ಹೆಚ್ಚಿನ ಉತ್ಖನನ ನಡೆಸುವ ಸಾಧ್ಯತೆ ಇದೆ.

11–12ನೇ ಶತಮಾನದ ದೇವಸ್ಥಾನಗಳಿಗೆ ಹೆಸರುವಾಸಿಯಾದ ಲಕ್ಕುಂಡಿ ಗ್ರಾಮವು 101 ದೇವಸ್ಥಾನಗಳು ಮತ್ತು 101 ಬಾವಿಗಳನ್ನು ಹೊಂದಿರುವ 'ಶಿಲ್ಪಕಲೆಯ ತೊಟ್ಟಿಲು' ಎಂದೇ ಖ್ಯಾತಿ ಪಡೆದಿದೆ.

ಘಟನೆಯ ಬೆನ್ನಲ್ಲೇ ಎಸ್‌ಪಿ ರೋಹನ್ ಜಗದೀಶ್, ಎಡಿಸಿ ದುರುಗೇಶ್ ಕೆ.ಆರ್ ಸೇರಿದಂತೆ ಹಲವು ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಮಾಹಿತಿ ಪಡೆದರು. ಒಟ್ಟು 466 ಗ್ರಾಂ ಪುರಾತನ ಕಾಲದ ಚಿನ್ನದ ಆಭರಣಗಳು ಸಿಕ್ಕಿದ್ದು, ಪ್ರಸ್ತುತ ಇದರ ಮೌಲ್ಯ ಂದಾಜು 65ರಿಂದ 70 ಲಕ್ಷ ಆಗಬಹುದು ಎಂದು ಅಂದಾಜಿಸಲಾಗಿದೆ. ಪತ್ತೆಯಾದ ಆಭರಣಗಳನ್ನು ಪಂಚರ ಸಮ್ಮುಖದಲ್ಲಿ ಜಿಲ್ಲಾಡಳಿತದ ಖಜಾನೆಗೆ ಒಪ್ಪಿಸಲಾಗಿದೆ. ಬಸವರಾಜ್ ಹಾಗೂ ಗಂಗವ್ವ ರಿತ್ತಿ ಅವರ ಕುಟುಂಬದ ಪ್ರಾಮಾಣಿಕತೆಯನ್ನು ಅಧಿಕಾರಿಗಳು ಶ್ಲಾಘಿಸಿದ್ದಾರೆ.

ಶನಿವಾರ ಪತ್ತೆಯಾದ ನಿಧಿ ಕಲ್ಯಾಣ ಚಾಲುಕ್ಯರ ಕಾಲದ ಆರ್ಥಿಕ ಸಮೃದ್ಧಿಯನ್ನು ಮತ್ತೊಮ್ಮೆ ನೆನಪಿಸಿದೆ.



### ಹೂವಿನಶಿಗ್ಲಿ ಮಠದಲ್ಲಿ ಜ. 13ರಿಂದ 15ರವರೆಗೆ ಜಾತ್ರಾಮಹೋತ್ಸವ । ಸಾಂಗವಾಗಿ ನೆರವೇರಿದ ಖಡಕ್ ರೊಟ್ಟಿ-ಕರಿಂಡಿ ‘ಂಗ್ರಹಿಸುವ ಕಾರ್ಯ

# ಗ್ರಾಮದ ತುಂಬೆಲ್ಲ ರೊಟ್ಟಿ ಬುಟ್ಟಿಗಳ ಸಾಲು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಹೂವಿನಶಿಗ್ಲಿ ಮಠದಲ್ಲಿ ಜ. 13ರಿಂದ 15ರವರೆಗೆ ನಡೆಯುವ ಖಡಕ್ ರೊಟ್ಟಿ–ಕರಿಂಡಿ ಜಾತ್ರಾಮಹೋತ್ಸವ ಹಿನ್ನೆಲೆಯಲ್ಲಿ ಶನಿವಾರ ಶ್ರೀಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು, ಕುಂದಗೋಳದ ಶ್ರೀ ಬಸವಣ್ಣಜ್ಜನವರು, ಜಮಖಂಡಿಯ ಗದಿಗೆಯ್ಯ ದೇವರ ನೇತೃತ್ವದಲ್ಲಿ ಗ್ರಾಮದಲ್ಲಿ ಎತ್ತಿನ ಬಂಡಿಗಳ ಮೂಲಕ ರೊಟ್ಟಿ, ಕಡಬು ಇತರೇ ಆಹಾರ ಪದಾರ್ಥ ಸಂಗ್ರಹಿಸುವ ಕಾರ್ಯ ಅತ್ಯಂತ ಶೃದ್ಧಾ ಭಕ್ತಿಯಿಂದ ನೆರವೇರಿತು.

ಕಳೆದ 46 ವರ್ಷಗಳಿಂದ ನಡೆಯುತ್ತಿರುವ ಈ

> ಹೂವಿನಶಿಗ್ಲಿ ಮಠದಲ್ಲಿ ಮಕರ ಸಂಕ್ರಾಂತಿ ಪುಣ್ಯಕಾಲದಲ್ಲಿ ಜರುಗುವ ಜಾತ್ರಾ ಮಹೋತ್ಸವದ ನಿಮಿತ್ತ ನಡೆಯುವ ಖಟಕ್–ರೊಟ್ಟಿ, ಕರಿಂಡಿ, ಕಡಬು ಪ್ರಸಾದ ಮಾಡುವ ಸಂಪ್ರದಾಯವನ್ನು ಶ್ರೀಮಠದ ಲಿಂ.ನಿರಂಜನ ಮಹಾಸ್ವಾಮಿಗಳು ಹಾಕಿಕೊಟ್ಟಿದ್ದಾರೆ. 5 ದಶಕಗಳಿಂದ ಭಕ್ತರು ಮಠಕ್ಕೆ ರೊಟ್ಟಿ, ಧಾನ್ಯ ತಂದು ಕೊಡುತ್ತಿದ್ದರು. 2 ವರ್ಷದಿಂದ ನಾವೇ ಭಕ್ತರ ಮನೆಯತ್ತ ಹೋಗಿ ಬಂಡಿ ಮೂಲಕ ರೊಟ್ಟಿ ಸಂಗ್ರಹಿಸುವ ಕಾರ್ಯ ಮಾಡಿದ್ದೇವೆ. ಗ್ರಾಮದ ಭಕ್ತರು ಶ್ರೀಮಠದ ಶಕ್ತಿ ಮತ್ತು ಸಂಪತ್ತಾಗಿದ್ದು, ಜಾತ್ರೆಯಷ್ಟೇ ಅಲ್ಲದೇ ವರ್ಷದುದ್ದಕ್ಕೂ ಗುರುಕುಲ ಮತ್ತು ಶಾಲೆಯ ಮಕ್ಕಳ ತ್ರಿವಿಧ ದಾಸೋಹ ಸೇವೆಗೆ ಸೇವೆ ಮಾಡುತ್ತಾ ಬಂದಿದ್ದಾರೆ. ಜಾತ್ರೆಯ 3 ದಿನಗಳ ಕಾಲ ನಾಡಿನ ಅನೇಕ ಹರ–ಗುರು–ಚರ ಮೂರ್ತಿಗಳ ಸಾನ್ನಿಧ್ಯದಲ್ಲಿ ಅನೇಕ ಧಾರ್ಮಿಕ ಕಾರ್ಯಕ್ರಮಗಳು, ಸಾಮೂಹಿಕ ವಿವಾಹ ಮಹೋತ್ಸವ ಜರುಲಿವೆ. ಎಲ್ಲ ಕಾರ್ಯಗಳಿಗೆ ಭಕ್ತರ ಸೇವೆ– ಸಹಾಯ–ಸಹಕಾರ ಸ್ಮರಣೀಯ.
>
> **– ಶ್ರೀ ಚನ್ನವೀರ ಮಹಾಸ್ವಾಮಿಗಳು.**



ಜಾತ್ರಾ ಮಹೋತ್ಸವಕ್ಕೆ ಒಂದು ವಾರ ಮೊದಲು ಗ್ರಾಮದಲ್ಲಿನ ಎಲ್ಲ ಜಾತಿ, ಜನಾಂಗದವರೂ ರೊಟ್ಟಿ, ದವಸ–ಧಾನ್ಯಗಳನ್ನು ಕೈಲಾದ ಮಟ್ಟಿಗೆ ಮಠಕ್ಕೆ ತಂದು ಸಲ್ಲಿಸುವುದು ಸಂಪ್ರದಾಯ. ಕಳೆದ ವರ್ಷದಿಂದ ಶ್ರೀಗಳೇ ಎತ್ತಿನ ಬಂಡಿ, ವಾದ್ಯಮೇಳದೊಂದಿಗೆ ಗ್ರಾಮದಲ್ಲಿ ಸಂಚರಿಸಿ ನೇರವಾಗಿ ಭಕ್ತರಿಂದಲೇ ರೊಟ್ಟಿ, ದವಸಧಾನ್ಯ ಸಂಗ್ರಹಿಸಿ ಮೆರವಣಿಗೆ ಮೂಲಕ ಮಠಕ್ಕೆ ತರುವ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದರು.

ಶ್ರೀಗಳೇ ಭಕ್ತರ ಮನೆ ಬಾಗಿಲಿನತ್ತ ಬರುತ್ತಾರೆಂಬ ಸಂಭ್ರಮದಿಂದ ಗ್ರಾಮ ಪಂಚಾಯಿತಿಯವರು ಊರೆಲ್ಲ ಸ್ವಚ್ಛತೆ ಮಾಡಿದ್ದರು. ಪ್ರತಿ ಓಣಿಯಲ್ಲೂ ಭಕ್ತರು ತಮ್ಮ ಮನೆಯ ಮುಂದೆ ತಳಿರು–ತೋರಣ ಕಟ್ಟಿ, ರಂಗೋಲಿ ಹಾಕಿದ್ದರು. ಜಾತ್ರೆಯ ಪ್ರಸಾದ ಸೇವೆಗಾಗಿ ಪ್ರತಿ ಮನೆಯಲ್ಲಿ ಮೊದಲೇ ಸಿದ್ಧಪಡಿಸಿದ್ದ ನೂರಾರು ರೊಟ್ಟಿಗಳ ಎಣ್ಣೆಬುಟ್ಟಿಗೆ ಹೊಸ ಬಟ್ಟೆ ಕಟ್ಟಿ ಪೂಜೆ ಮಾಡಿ ತಲೆಯ ಮೇಲೆ ಹೊತ್ತು ಕಾಯುತ್ತಿದ್ದರು. ಶೃದ್ಧಾ ಭಕ್ತಿಯಿಂದ ರೊಟ್ಟಿ ಬುಟ್ಟಿ ಹೊತ್ತು ತಂದ ತಾಯಂದಿರ ತಲೆಯ ಮೇಲಿನ ಬುಟ್ಟಿಯನ್ನು ಮುಟ್ಟಿ ಆಶೀರ್ವಸಿದ ಬಳಿಕ ಸಾಲುಗಟ್ಟಿ ಬರುತ್ತಿದ್ದ ಎತ್ತಿನ ಚಕ್ಕಡಿಯಲ್ಲಿ ರೊಟ್ಟಿ ಸಂಗ್ರಹಿಸಲಾಗುತ್ತಿತ್ತು. ಅಲ್ಲದೇ ನೂರಾರು ಮಹಿಳೆಯರು ರೊಟ್ಟಿ ಬುಟ್ಟಿ ಹೊತ್ತು ಮೆರವಣಿಗೆ ಮೂಲಕ ಮಠದವರೆಗೂ ತಲುಪಿಸಿ ಸಂತೃಪ್ತ ಭಾವ ವ್ಯಕ್ತಪಡಿಸಿದರು. ಅಲಂಕೃತ ಎತ್ತಿನ ಬಂಡಿ, ಭಜನೆ, ಡೊಳ್ಳು ವಾದ್ಯಮೇಳದ ಮೆರವಣಿಗೆಯಲ್ಲಿ ವೇಳೆ ಎಲ್ಲ ಜಾತಿ, ಜನಾಂಗದ ಹಿರಿಯರು, ಮಹಿಳೆಯರು, ಯುವಕರು, ಮಕ್ಕಳು ಶ್ರೀಮಠದ ಭಕ್ತ ಮಂಡಳಿಯ ಅಂದಾನಯ್ಯ ಹಿರೇಮಠ, ನೀಲಪ್ಪ ಹೊಸೂರ, ಆರ್.

> ನಮ್ಮೂರಲ್ಲಿನ ಮಠದ ಲಿಂ. ನಿರಂಜನ ಸ್ವಾಮಿಗಳು ಮತ್ತು ಈಗಿನ ಚನ್ನವೀರ ಶ್ರೀಗಳ ಹೂವಿನಶಿಗ್ಲಿ ಎಂಬ ಚಿಕ್ಕ ಗ್ರಾಮ ನಾಡಿನೆಲ್ಲೆಡೆ ಹೆಸರಾಗಿದೆ. ಶ್ರೀಮಠದ ಗುರುಕುಲದ ಮಕ್ಕಳಿಗಾಗಿ, ಪ್ರತಿ ವರ್ಷ ನಡೆಯುವ ಜಾತ್ರಾ ಮಹೋತ್ಸವಕ್ಕಾಗಿ ಅನ್ನದಾನದ ಅಳಿಲು ಸೇವೆ ಮಾಡುವ ಅವಕಾಶ ಕಲ್ಪಿಸಿರುವುದು ನಮ್ಮ ಭಾಗ್ಯ. ಶ್ರೀಮಠ ನಮ್ಮೂರ ಜನರಲ್ಲಿ ಮೇಲು–ಕೀಳು, ಬಡವ–ಶ್ರೀಮಂತ ಬೇಧ–ಭಾವ ಹೋಗಲಾಡಿಸಿ ಎಲ್ಲರೂ ಸೌಹಾರ್ದತೆ, ಸಹೋದರತೆಯ ಭಾವದಿಂದ ಬದುಕುವುದಕ್ಕೆ ಪ್ರೇರಣೆಯಾಗಿದೆ.
>
> **– ಗಿರಿಜವ್ವ ಶ್ಯಾಮಸುಂದರ.**
> **ಶ್ರೀಮಠದ ಭಕ್ತೆ.**

ಎಸ್. ಪಾಟೀಲ, ಮಾದೇವಪ್ಪ ಬಿಷ್ಟಣ್ಣವರ, ನಿಂಗಪ್ಪ ಕಳ್ಳಿಮನಿ, ಪಿ.ಎಚ್. ಪಾಟೀಲ, ಶಿವಲಿಂಗಯ್ಯ ಹಿರೇಮಠ ಸೇರಿ ಗ್ರಾಮಸ್ಥರು ಪಾಲ್ಗೊಂಡಿದ್ದರು. ಸಂಜೆಯ ಬಳಿಕ ರತೋತ್ಸವಕ್ಕೆ ಕಳಸಾರೋಹಣ ನೆರವೇರಿಸಲಾಯಿತು.




### ಆರೋಪಿಗಳಿಗೆ ನ್ಯಾಯಾಲಯದಿಂದ ಶಿಕ್ಷೆಯಾಗುವಂತೆ ಅಧಿಕಾರಿಗಳು ಕ್ರಮವಹಿಸಬೇಕು; ಎ.ಆರ್. ಕೃಷ್ಣಮೂರ್ತಿ

# ಇನಾಂವೀರಾಪೂರ ಪ್ರಕರಣದಲ್ಲಿ ಪಾರದರ್ಶಕ ತನಿಖೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಯಾವುದೇ ರೀತಿಯ ಒತ್ತಡಗಳಿಗೆ ಒಳಗಾಗದೆ, ಧಾರವಾಡ ಜಿಲ್ಲೆಯ ಇನಾಂವೀರಾಪೂರ ಪ್ರಕರಣದಲ್ಲಿ ದೌರ್ಜನ್ಯಕ್ಕೆ ಒಳಗಾಗಿರುವ ದಲಿತ ಕುಟುಂಬಕ್ಕೆ ನ್ಯಾಯ ಸಿಗುವಂತೆ ಮತ್ತು ಆರೋಪಿತರಿಗೆ ಕಠಿಣ ಶಿಕ್ಷೆ ಆಗುವಂತೆ ಕ್ರಮ ವಹಿಸುವ ನಿಟ್ಟಿನಲ್ಲಿ ಎಲ್ಲ ಇಲಾಖೆಗಳು ಪಾರದರ್ಶಕವಾಗಿ ಕೆಲಸ ಮಾಡಬೇಕೆಂದು ಕರ್ನಾಟಕ ವಿಧಾನ ಮಂಡಳದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷ ಎ.ಆರ್. ಕೃಷ್ಣಮೂರ್ತಿ ಹೇಳಿದರು.

ಅವರು ಶುಕ್ರವಾರ ಧಾರವಾಡ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಹುಬ್ಬಳ್ಳಿ ತಾಲೂಕಿನ ಇನಾಂವೀರಾಪೂರ ಗ್ರಾಮದಲ್ಲಿ ನಡೆದ ದೌರ್ಜನ್ಯ ಪ್ರಕರಣದ ಕುರಿತು ಕರ್ನಾಟಕ ವಿಧಾನ ಮಂಡಳದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಸದಸ್ಯರೊಂದಿಗೆ ಕಂದಾಯ, ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆ ಜರುಗಿಸಿ



ಮಾತನಾಡಿದರು.

ದಲಿತ ಸಮುದಾಯದ ಮೇಲೆ ನಡೆದಿರುವ ಈ ರೀತಿಯ ದೌರ್ಜನ್ಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ದೊರಕುವಂತೆ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಂತ್ರಸ್ತ ಕುಟುಂಬಕ್ಕೆ ನ್ಯಾಯ ಸಿಗುವಂತೆ, ಅಗತ್ಯವಿರುವ ಎಲ್ಲ ರೀತಿಯ ಸಹಾಯ ಹಾಗೂ ರಕ್ಷಣೆ ಒದಗಿಸಲಾಗುವುದು. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಗ್ರಾಮ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಬೇಕು ಹಾಗೂ ಸಾಮಾಜಿಕ ಸೌಹಾರ್ದತೆ ಕಾಪಾಡಲು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಅವರು ಸೂಚಿಸಿದರು.

ವೇದಿಕೆಯಲ್ಲಿ ಸಮಿತಿಯ ಸದಸ್ಯರಾದ ಐಹೊಳೆ ದುರ್ಯೋಧನ ಮಹಾಲಿಂಗಪ್ಪ, ಡಾ. ಡಿ. ತಿಮ್ಮಯ್ಯ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಇದ್ದರು. ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ ಸ್ವಾಗತಿಸಿದರು.

ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯ ಬೆಳಗಾವಿ ವಿಭಾಗದ ಪೊಲೀಸ್ ವರಿಷ್ಠಾಧಿಕಾರಿ ರವೀಂದ್ರ ಗಡಾದ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಡಿವೈಎಸ್ಪಿ ವಿನೋದ ಮುಕ್ತೇದಾರ, ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಡಿಮ್ಹಾನ್ಸ್ ನಿರ್ದೇಶಕ ಡಾ. ಅರುಣಕುಮಾರ ಸಿ., ಡಿಎಚ್‌ಓ

> ಸಭೆಯಲ್ಲಿ ಕರ್ನಾಟಕ ವಿಧಾನ ಮಂಡಳದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಸದಸ್ಯರಾದ ಡಾ. ಡಿ.ತಿಮ್ಮಯ್ಯ, ಹೇಮಲತಾ ನಾಯಕ, ಎಫ್.ಹೆಚ್. ಜಕ್ಕಪ್ಪನವರ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಕೃಷ್ಣ ನಾಯಕ, ಡಾ. ಚಂದ್ರು ಲಮಾಣಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಸಮೃದ್ಧಿ ವಿ. ಮಂಜುನಾಥ ಮಾತನಾಡಿದರು.

ಡಾ. ಎಸ್.ಎಂ. ಹೊನಕೇರಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಧಿಕಾರಿ ವಿಜಯಲಕ್ಷ್ಮಿ ಪಾಟೀಲ, ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಜೆ.ಬಿ. ಮಜ್ಜಗಿ, ಹುಬ್ಬಳ್ಳಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ.ರಾಮಚಂದ್ರ ಹೊಸಮನಿ, ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯ ಇನ್ಸಪೆಕ್ಟರ್ ಮುರುಗೇಶ ಚನ್ನಣ್ಣವರ, ಸಹಾಯಕ ನಿರ್ದೇಶಕಿ ಪ್ರಿಯದರ್ಶಿನಿ ಹಿರೇಮಠ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅತೀಕಾ ಸಿದ್ದಿ ಮುಂತಾದವರಿದ್ದರು.

# ವಿಶೇಷ ರೈಲುಗಳು ಗದಗ ಮೂಲಕವೇ ಸಂಚರಿಸಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರು-ವಿಜಯಪುರ ವಿಶೇಷ ರೈಲುಗಳು ಗದಗ ಮೂಲಕವೇ ಸಂಚರಿಸಲು ವಿಶ್ವನಾಥ ಖಾನಾಪೂರ ರೈಲ್ವೆ ಇಲಾಖೆಗೆ ಮನವಿ ಮಾಡಿದ್ದಾರೆ.

ಯಶವಂತಪುರ-ವಿಜಯಪುರ ಹಬ್ಬದ ವಿಶೇಷ ರೈಲು ಸಂಕ್ರಾಂತಿ ಮತ್ತು ಗಣರಾಜ್ಯೋತ್ಸವದ ಸಂದರ್ಭದಲ್ಲಿ ಜನವರಿ 13ರಂದು ರೈಲು ಸಂಖ್ಯೆ: 06245 ಮತ್ತು ಜ. 23ರಂದು ರಾತ್ರಿ 7.15ಕ್ಕೆ ಎಸ್.ಎಂ.ವಿ.ಟಿ ರೈಲು ನಿಲ್ದಾಣದಿಂದ ಹೊರಡುವ ರೈಲು ಮರುದಿನ ಬೆಳಿಗ್ಗೆ 7ಕ್ಕೆ ವಿಜಯಪುರ ತಲುಪಲಿದೆ.

ಇಂತಹ ವಿಶೇಷ ಹಬ್ಬದ ಸಂದರ್ಭದಲ್ಲಿ ನಮ್ಮ ಗದಗ ಜಿಲ್ಲೆಯ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಯಾವುದೇ ವಿಶೇಷ ರೈಲುಗಳು ಇಲ್ಲ. ಹೀಗಾಗಿ ಬೆಂಗಳೂರು-ವಿಜಯಪುರ ವಿಶೇಷ ರೈಲುಗಳಿಗೆ ಗದುಗಿನಲ್ಲಿಯೂ ನಿಲುಗಡೆ ನೀಡುವಂತೆ ಅವರು ವಿನಂತಿಸಿದ್ದಾರೆ.

# ಬಡವರ ಮನೆ ಧ್ವಂಸ; ವೆಲ್ಫೇರ್ ಪಾರ್ಟಿ ಖಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಕಾಂಗ್ರೆಸ್ ಸರ್ಕಾರ ಕಾರ್ಪೊರೇಟರ್ ಪರ ಕೆಲಸಕ್ಕೆ ಕೈಹಾಕಿದಂತಿದೆ. ಬೆಂಗಳೂರು ಕೋಗಿಲು ಮತ್ತು ಥಣಿಸಂದ್ರ ನಿವಾಸಿಗಳ ಜೀವನ ಬೀದಿಪಾಲು ಮಾಡುತ್ತಿದೆ ಎಂದು ಗದಗ ಜಿಲ್ಲಾ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಜಿಲ್ಲಾ ಅಧ್ಯಕ್ಷರಾದ ಜುನೈದ್ ಉಮಚಗಿ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯ ಅಲ್ಪಸಂಖ್ಯಾತರು ಕಾಂಗ್ರೆಸ್ ಪಕ್ಷಕ್ಕೆ ಮನ್ನಣೆ ನೀಡಿದ್ದಾರೆ. ಆದರೆ ಅದೇ ಕಾಂಗ್ರೆಸ್ ಇಂದು ಬಡವರ ಪಾಲಿಗೆ ಯಮನಾಗಿದೆ. ಈ ವಿಚಾರವಾಗಿ ಕಾಂಗ್ರೆಸ್ ಹೈಕಮಾಂಡ್ ಏನು ಮಾಡುತ್ತಿದೆ? ಇದು ದ್ವೇಷ ರಾಜಕಾರಣವಲ್ಲವೇ? ಅಥವಾ ಕಾಂಗ್ರೆಸ್ ಎರಡು ಮುಖದ ಹಾವಿನಂತೆ ವರ್ತಿಸುತ್ತಿದೆಯೇ ಎಂಬ ವಿಚಾರವಾಗಿ ಕಾಂಗ್ರೆಸ್ ತನ್ನ ನಿಲುವನ್ನು ಸ್ಪಷ್ಟಪಡಿಸಲಿ.

ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ ಬಡವರ ವಿರೋಧಿ ಅಲ್ಲ ಎಂದು ಸ್ಪಷ್ಟಪಡಿಸಿ ತಕ್ಷಣ ಅಲ್ಲಿನ ನಿವಾಸಿಗಳಿಗೆ ಪುನರ್ವಸತಿ ಕಲ್ಪಿಸಲಿ. ಇಲ್ಲವಾದರೆ ಮುಂದಿನ ಚುನಾವಣೆಯಲ್ಲಿ ರಾಜ್ಯದ ಮತದಾರರು ವಿಶೇಷವಾಗಿ ಮುಸ್ಲಿಮರ ಮೇಲೆ ಆಗುತ್ತಿರುವ ಅಕ್ರಮ, ಅನ್ಯಾಯದ ವಿರುದ್ಧ ಸರ್ಕಾರಕ್ಕೆ ಪಾಠ ಕಲಿಸುವ ತಯಾರಿ ಮಾಡಿಕೊಳ್ಳಬೇಕಾದೀತು ಎಂದು ಎಚ್ಚರಿಕೆ ನೀಡಿದ್ದಾರೆ.

**ಡಾ. ಬಿ.ಎಸ್. ಗದ್ದಗಿಮಠ ಸಂಸ್ಮರಣೆ ದತ್ತಿ ಕಾರ್ಯಕ್ರಮದಲ್ಲಿ ಲೀಲಾವತಿ ಆರ್.ಪ್ರಸಾದ ಅಭಿಮತ**

# ಜಾನಪದ ಉಳಿಯಬೇಕು ಎಂದರಷ್ಟೇ ಸಾಲದು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಾನಪದ ಸಾಹಿತ್ಯ ಶಿಷ್ಟ ಸಾಹಿತ್ಯಕ್ಕೆ ತಾಯಿಯಿದ್ದಂತೆ. ನಮ್ಮ ಜನಪದರು ಯಾವುದೇ ವಿಶ್ವವಿದ್ಯಾಲಯದಿಂದ ಪದವಿ ಪಡೆಯದಿದ್ದರೂ ಜಾನಪದ ಹಾಡಗಳನ್ನು ರಚಿಸಿ ನಮ್ಮ ಜನಪದ ಸಂಸ್ಕೃತಿಯನ್ನು ಶ್ರೀಮಂತಗೊಳಿಸಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಜಿ ಸಚಿವೆ ಲೀಲಾವತಿ ಆರ್.ಪ್ರಸಾದ ಅಭಿಪ್ರಾಯಪಟ್ಟರು.

ಅವರು ಕರ್ನಾಟಕ ವಿದ್ಯಾವರ್ಧಕ ಸಂಘವು ಹಮ್ಮಿಕೊಂಡಿದ್ದ ಡಾ. ಬಿ.ಎಸ್. ಗದ್ದಗಿಮಠ ಸಂಸ್ಮರಣೆ ದತ್ತಿ ಕಾರ್ಯಕ್ರಮದಲ್ಲಿ ಕನ್ನಡ ಜಾನಪದ ತಜ್ಞ ಹಾಗೂ ಕನ್ನಡ ಜಾನಪದ ಕಲಾವಿದೆ ರಾಜ್ಯ ಮಟ್ಟದ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಾನಪದ ಸಾಹಿತ್ಯ ನಮ್ಮ ಜನಪದರು ನಮಗಾಗಿ ಬಿಟ್ಟುಹೋದ ದೊಡ್ಡ ಆಸ್ತಿ. ಆದರೆ ಇಂದಿನ ಯುವಕರು, ವಿದ್ಯಾರ್ಥಿಗಳಿಗೆ ಜಾನಪದ ಎಂದರೇನು, ಜಾನಪದ ಪರಿಕರಗಳ ಬಗ್ಗೆ ಪರಿಜ್ಞಾನವಿಲ್ಲದಿರುವುದು ವಿಷಾದನೀಯ. ಜಾನಪದ ಉಳಿಯಬೇಕು ಎಂದು ಮಾತಿನಿಂದ ಹೇಳಿದರೆ ಸಾಲದು. ನಾನು ಕನ್ನಡ ಮತ್ತು ಸಂಸ್ಕೃತಿ ಸಚಿವೆಯಾಗಿದ್ದಾಗ ಮೈಸೂರು ರಸ್ತೆ ರಾಮನಗರದ ಬಳಿ ಜಾನಪದ ಲೋಕ ಸ್ಥಾಪನೆಗೆ ಸರ್ಕಾರದ ಮೇಲೆ ಒತ್ತಡ ಹೇರಿ 12 ಎಕರೆ ಜಮೀನು ಮಂಜೂರಿ ಮಾಡಿಸಿ ಅಲ್ಲಿ ಜನಪದರು ಉಪಯೋಗಿಸುತ್ತಿದ್ದ ಪರಿಕರ ಪ್ರದರ್ಶನಕ್ಕೆ ಅನುಕೂಲಿಸಿದ್ದೇನೆ. ನಾವು ಹೇಗೆ ಬದುಕಬೇಕೆಂಬುದನ್ನು ಕಲಿಸಲು ಯಾವ ಪತ್ಯ ಹಾಗೂ ವಿಶ್ವವಿದ್ಯಾಲಯದ ಅವಶ್ಯಕತೆ ಇಲ್ಲ ಎಂದು ಹೇಳಿದರು.



ಪ್ರಶಸ್ತಿ ಪುರಸ್ಕೃತರಾದ ವಿಶ್ರಾಂತ ಪ್ರಾಧ್ಯಾಪಕ ಡಾ. ಕೃಷ್ಣಮೂರ್ತಿ ಹನೂರ ಮಾತನಾಡಿ, ಡಾ. ಬಿ.ಎಸ್. ಗದ್ದಗಿಮಠ ಅವರು ಸೂಕ್ತ ಸೌಲಭ್ಯ ಹಾಗೂ ತಾಂತ್ರಿಕ ಸೌಲಭ್ಯವಿಲ್ಲದ ಕಾಲದಲ್ಲಿ ಕರ್ನಾಟಕದಾದ್ಯಂತ ಸಂಚರಿಸಿ ಒಂದು ಲಕ್ಷಕ್ಕೂ ಹೆಚ್ಚು ಜಾನಪದ ಹಾಡುಗಳನ್ನು ಸಂಗ್ರಹಿಸಿ ನಮ್ಮ ಜಾನಪದ ಕಣಜ ಶ್ರೀಮಂತಗೊಳಿಸಿದ ಪ್ರಾತಃಸ್ಮರಣೀಯರು. ಅಕ್ಷರಗಳು ಮನುಷ್ಯ ಸಂಬಂಧ ಗಟ್ಟಿಗೊಳಿಸುತ್ತವೆ. ರಾಜಕಾರಣದಲ್ಲಿ ಸಾಹಿತ್ಯದ ಬಗ್ಗೆ ಆಸಕ್ತಿ ಬೇಕು. ಲೀಲಾವತಿ ಆರ್.ಪ್ರಸಾದ ಸಾಹಿತ್ಯದಲ್ಲಿ ಆಸಕ್ತಿ ಹೊಂದಿದ ಮಹಾನ್ ಸಾಧಕರು. 1954ರಲ್ಲಿ ಡಾ. ಬಿ.ಎಸ್. ಗದ್ದಗಿಮಠ ಇಡೀ ಭಾರತದಲ್ಲಿ ಜಾನಪದ ಕ್ಷೇತ್ರದಲ್ಲಿ ಪಿ.ಎಚ್.ಡಿ ಪಡೆದ ಮೊದಲಿಗರು. ಅಂಥವರ ಹೆಸರಿನಲ್ಲಿಕೊಡುವ ಈ ಪ್ರಶಸ್ತಿ ನನ್ನ ಘನತೆ ಹೆಚ್ಚಿಸಿದೆ ಎಂದು ಹೇಳಿದರು.

ಕ.ವಿ.ವಿ ಕುಲಪತಿ ಡಾ. ಎ.ಎಮ್. ಖಾನ್ ಮಾತನಾಡಿ, ನಮ್ಮ ವಿಶ್ವವಿದ್ಯಾಲಯದಲ್ಲಿ ಜಾನಪದ ವಿಭಾಗಕ್ಕೆ ವಿಶೇಷ ಮಾನ್ಯತೆ ತಂದುಕೊಟ್ಟವರೇ ಡಾ. ಬಿ.ಎಸ್. ಗದ್ದಗಿಮಠ ಎಂದು ಹೇಳಿದರು. ‘ಜಾನಪದ ಜೀವ-ಜೀವಾಳ ಡಾ. ಬಿ.ಎಸ್. ಗದ್ದಗಿಮಠ’ ವಿಷಯದ ಕುರಿತು ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಪಿ.ಕೆ. ಖಂಡೋಬಾ ಉಪನ್ಯಾಸ ನೀಡಿದರು.

ನೀಲಗಂಗಾ ಚರಂತಿಮಠ ಪ್ರಶಸ್ತಿ ಸ್ವೀಕರಿಸಿ, ಸಂಘಕ್ಕೆ ಕೃತಜ್ಞತೆ ಸಲ್ಲಿಸಿದರು. ಡಾ. ಸಂಜೀವ ಕುಲಕರ್ಣಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವೇದಿಕೆ ಮೇಲೆ ಸತೀಶ ತುರಮರಿ ಉಪಸ್ಥಿತರಿದ್ದರು. ವೀರಣ್ಣ ಒಡ್ಡೀನ, ಡಾ. ಮಹೇಶ ಹೊರಕೇರಿ, ಡಾ. ಜಿನದತ್ತ ಹಡಗಲಿ, ಗುರು ಹಿರೇಮಠ, ಡಾ. ಧನವಂತ ಹಾಜವಗೋಳ, ಡಾ. ತೇಜಸ್ವಿನಿ ಕಟ್ಟಿಮನಿ, ಡಾ. ಡಿ.ಎಂ. ಹಿರೇಮಠ, ಪ್ರೊ. ಐ.ಜಿ. ಸನದಿ, ಪ್ರೊ. ಸಿ.ಆರ್. ಯರವಿನತೆಲಿಮಠ, ಡಾ. ಅರವಿಂದ ಯಾಳಗಿ, ಡಾ. ಪ್ರಜ್ಞಾ ಮತ್ತಿಹಳ್ಳಿ, ಎಂ.ಎಂ. ಚಿಕ್ಕಮಠ, ಡಾ. ಪಾರ್ವತಿ ಹಾಲಭಾವಿ, ಡಾ. ಮಲ್ಲಿಕಾರ್ಜುನ ಪಾಟೀಲ ಮುಂತಾದವರಿದ್ದರು.

ಶಿವಾನಂದ ಭಾವಿಕಟ್ಟಿ ಸ್ವಾಗತಿಸಿದರು. ಪುಲಕೇಶಿ ಗದ್ದಗಿಮಠ ಪ್ರಾಸ್ತಾವಿಸಿದರು. ಶಂಕರ ಕುಂಬಿ ನಿರೂಪಿಸಿದರು. ನಿಜಗುಣಿ ಗದ್ದಗಿಮಠ, ಉಷಾ ಗದ್ದಗಿಮಠ ಅತಿಥಿಗಳನ್ನು ಪರಿಚಯಿಸಿದರು. ರವಿ ಗದ್ದಗಿಮಠ ವಂದಿಸಿದರು.



ಶ್ರೀ ಜಗದ್ಗುರು ತೋಂಟದಾರ್ಯ ಮಠ ಯಡಿಯೂರ-ಗದಗ, ಲಿಂಗಾಯತ ಪ್ರಗತಿಶೀಲ ಸಂಘ ಗದಗ ಹಾಗೂ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಇವರ ಸಹಯೋಗದಲ್ಲಿ ಆಯೋಜಿಸಿದ್ದ ಅವ್ವನ ಕುರಿತ ವಿಶೇಷ ಶಿವಾನುಭವ, ಪ್ರತಿಭಾ ಪುರಸ್ಕಾರ ಹಾಗೂ ಮಹಿಳಾ ಪೌರಕಾರ್ಮಿಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಕಾರ್ಯಕ್ರಮದ ರೂವಾರಿಗಳಾದ ಅವ್ವ ಸೇವಾ ಟ್ರಸ್ಟಿನ ಗದಗಿನ ಸಂಚಾಲಕರಾದ ಡಾ. ಬಸವರಾಜ ಧಾರವಾಡ ಅವರನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ, ಅವ್ವ ಸೇವಾ ಟ್ರಸ್ಟ್‌ನ ಕಾರ್ಯದರ್ಶಿ ಶಶಿ ಸಾಲಿ ಮುಂತಾದವರು ಉಪಸ್ಥಿತರಿದ್ದರು.

**ಅಕ್ಷರದ ಮಾತೆ ಸಾವಿತ್ರಿಬಾಯಿ ಫುಲೆಯವರ 195ನೇ ಜಯಂತಿ ಕಾರ್ಯಕ್ರಮ**

# ಹೆಣ್ಣಿನ ಪಾಲಿನ ಶಾರದೆ ಸಾವಿತ್ರಿಬಾಯಿ ಫುಲೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಷರದ ಮಾತೆ, ದೇಶದ ಮೊದಲ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರು ಚರಿತ್ರೆಯಲ್ಲಿ ಬರುವುದಕ್ಕಿಂತ ಪೂರ್ವ ಒಂದು ಕಾಲಘಟ್ಟದಲ್ಲಿ ದೇಶದ ಮಹಿಳೆಯನ್ನು ವಂಚಿಸಿ ಶಿಕ್ಷಣದಿಂದ ದೂರವಿರಿಸಿ ಅಮಾನುಷವಾಗಿ ನಡೆಸಿಕೊಳ್ಳುತ್ತಿದ್ದುದರ ವಿರುದ್ಧ ಧ್ವನಿಯೆತ್ತಿ ಅವರಿಗೂ ಕೂಡಾ ಶಿಕ್ಷಣದ ಜೊತೆಗೆ ಸಮಾಜದಲ್ಲಿ ಸಮಾನತೆ ಸಿಗುವಂತೆ ಪ್ರಯತ್ನಿಸಿ, ಹೆಣ್ಣುಮಕ್ಕಳ ಪಾಲಿಗೆ ನಿಜಶಾರದೆಯಾಗಿದ್ದಾರೆ ಎಂದು ಗ್ರಾಮೀಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿಮನಿ ಅಭಿಪ್ರಾಯಪಟ್ಟರು.

ಅವರು ವೃತ್ತಿಪರ ಮಹಿಳಾ ವಸತಿ ನಿಲಯದಲ್ಲಿ ಸಮಾಜ ಕಲ್ಯಾಣ ಇಲಾಖೆ ಗದಗ, ಕರ್ನಾಟಕ ದಲಿತ ವಿದ್ಯಾರ್ಥಿ ಒಕ್ಕೂಟ ಗದಗ ಹಾಗೂ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ ಅಧ್ಯಯನ ಕೇಂದ್ರ ಗದಗ ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಅಕ್ಷರದ ಮಾತೆ ಸಾವಿತ್ರಿಬಾಯಿ ಫುಲೆಯವರ 195ನೇ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು.



ರಾಜ್ಯ ದ.ಸಂ.ಸ ಸಂಘಟನಾ ಸಂಚಾಲಕರು ಹಾಗೂ ನಿವೃತ್ತ ಶಿಕ್ಷಕರಾದ ಎಸ್.ಎನ್. ಬಳ್ಳಾರಿ ಮಾತನಾಡಿ, ಸಾವಿತ್ರಿಬಾಯಿ ಫುಲೆಯವರ ಜೀವನ ಪ್ರತಿಯೊಬ್ಬ ಸ್ವಾಭಿಮಾನಿ ಮಹಿಳೆಗೆ ಸ್ಫೂರ್ತಿಯಾಗಿದ್ದು, ಅವರ ಸಾಮಾಜಿಕ ಕಳಕಳಿ ಮಹಿಳೆಯರ ಏಳಿಗೆಗಾಗಿ ಶ್ರಮಿಸಿದ ಪರಿ ಕಷ್ಟಕರವಾಗಿದ್ದರೂ ಕೂಡಾ ಎದುರಿಸಿ ಸಾಧನೆ ಮಾಡಿರುವುದು ಅದ್ಭುತವಾದುದಾಗಿದೆ. ಪ್ರತಿಯೊಬ್ಬರೂ ಅವರ ಆದರ್ಶ ಪಾಲಿಸಬೇಕೆಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ನಂದಾ ಹಣಬರಟ್ಟಿ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯು ಉನ್ನತವಾದ ಗುರಿ ಹೊಂದಿ ಸಾಧನೆಗೈದರೆ ಅಸಾಧ್ಯವಾದುದು ಯಾವುದೂ ಇಲ್ಲ ಎಂದ ಅವರು, ಸಾಧಿಸುವ ಛಲ ಬೆಳೆಸಿಕೊಳ್ಳಲು ಕರೆ ನೀಡಿದರು.


ದಲಿತ ನೌಕರರ ಒಕ್ಕೂಟದ ಜಿಲ್ಲಾಧ್ಯಕ್ಷ ಚಂದ್ರು ಮೇಲಿನಮನಿ, ಕಾರ್ಯದರ್ಶಿಗಳಾದ ಮುತ್ತು ಮಾದರ, ತಾಲೂಕಾ ಸಂಚಾಲಕರಾದ ವಿನಾಯಕ ಬಳ್ಳಾರಿ, ದಲಿತ ನಾಯಕರಾದ ಮಂಜುನಾಥ ಮುಳಗುಂದ ಹಾಗೂ ವಿದ್ಯಾರ್ಥಿ ನಾಯಕರಾದ ವಿಶಾಲ ಗೋಶಲ್ಲನವರ ಸಂದರ್ಭೋಚಿತವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಯಿತು. ದಲಿತ ಕಲಾಮಂಡಳಿ ಸಂಚಾಲಕ ನಾಗರಾಜ ಗುತ್ತಿ ಕ್ರಾಂತಿಗೀತೆ ಹಾಡಿದರು. ಜಿಲ್ಲಾ ದಲಿತ ವಿದ್ಯಾರ್ಥಿ ಒಕ್ಕೂಟದ ಸಂಚಾಲಕ ಕೃಷ್ಣಾ ಪೂಜಾರ ಸ್ವಾಗತಿಸಿದರೆ, ಹರೀಶ ಭಾವಿಮನಿ ವಂದಿಸಿದರು. ವೇದಿಕೆಯ ಮೇಲೆ ತಾಲೂಕಾ ಸಮಾಜ ಕಲ್ಯಾಣ ಅಧಿಕಾರಿ ಗೋಪಾಲ ಪವಾರ, ನಿಲಯ ಪಾಲಕರಾದ ಸುಜಾತಾ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.



ಧಾರವಾಡದ ಸಂಸ್ಕೃತಿ ಚಿಂತಕಿ, ವೇದಮಾತೆ ಕವಿತಾ ಗುರುಸಿದ್ದಯ್ಯ ಹಿರೇಮಠ ಅವರ ಗುರುಬೋಧನೆಯಲ್ಲಿ ‘ಶ್ರೀ ಸಿದ್ಧಾಂತ ಶಿಖಾಮಣಿ’ ಗ್ರಂಥದ ಪಾರಾಯಣ ಕಲಿಕೆಯು 2025ರ ಜುಲೈಯಿಂದ ಆರಂಭಗೊಂಡು ಗುರುವಂದನೆ ಕಾರ್ಯಕ್ರಮದೊಂದಿಗೆ, ಧಾರವಾಡದ ಸಿಲ್ವರ್ ಆರ್ಚಡ್ ಸ್ನೇಹಬಳಗದ ಸಮುದಾಯ ಭವನದಲ್ಲಿ ಸಂಪೂರ್ಣಗೊಂಡಿದ್ದು, ಸಿದ್ಧಾಂತ ಶಿಖಾಮಣಿ ಪಾರಾಯಣ ಸಪ್ತಾಹವನ್ನು ಹಮ್ಮಿಕೊಳ್ಳಲಾಗಿತ್ತು. ಇದರ ಮುಕ್ತಾಯವು ಧಾರವಾಡದ ಡಾ. ಮಲ್ಲಿಕಾರ್ಜುನಯ್ಯ ಹಿರೇಮಠ ಅವರ ಮನೆಯಲ್ಲಿ ಸಂಪನ್ನಗೊಂಡಿತು.

# ಮಕ್ಕಳಲ್ಲಿ ಸಂಸ್ಕಾರ-ಸಂಸ್ಕೃತಿ ಬೆಳೆಸಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ ಉಳಿಸಿ-ಬೆಳೆಸುವುದು ಪ್ರತಿಯೊಬ್ಬ ಪಾಲಕರ, ಶಿಕ್ಷಕರ ಕರ್ತವ್ಯ ಎಂದು ನಿವೃತ್ತ ಆರ್‌ಟಿಓ ಬಿ.ಡಿ. ಹರ್ತಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಕಲಾಭವನದಲ್ಲಿ ಸಿ.ಬಿ. ಬಡ್ನಿ ಆಂಗ್ಲ ಮಾಧ್ಯಮ ಶಾಲೆಯ 10ನೇ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಇದು ಆಧುನಿಕ ತಂತ್ರಜ್ಞಾನದ ಯುಗವಾಗಿದ್ದು, ಮಕ್ಕಳನ್ನು ಕೇವಲ ಅಂಕ ಗಳಿಕೆಯತ್ತ ಗಮನ ನೀಡದೇ ಮಕ್ಕಳಲ್ಲಿ ಹುದುಗಿರುವ ಕಲೆ, ಸಂಸ್ಕೃತಿ, ಸಾಹಿತ್ಯ ಗುರುತಿಸಿ ಅವರನ್ನು ಉತ್ತಮ ಪ್ರಜೆಗಳನ್ನಾಗಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಮಕ್ಕಳಿಗೆ ಸಂಬಂಧಗಳ, ಗುರು-ಹಿರಿಯರನ್ನು ಗೌರವಿಸುವ, ಸಮಾಜದಲ್ಲಿ ಬದುಕುವ ರೀತಿ-ನೀತಿಗಳನ್ನು ಕಲಿಸುವುದು ಅಷ್ಟೇ ಮಹತ್ವದ್ದಾಗಿದೆ. ಇಂದು ದೇಶದ ಸಂಸ್ಕೃತಿಗಳನ್ನು ವಿಶ್ವವೇ ಅನುಸರಿಸುತ್ತಿದ್ದು, ನಾವೂ ಅದನ್ನು ಮರೆಯಬಾರದು. ವಿದ್ಯಾರ್ಥಿ ಜೀವನ ಬಂಗಾರದ ಜೀವನವಾಗಿದ್ದು, ಅದನ್ನು ಮಕ್ಕಳು, ಪಾಲಕರು ಶಿಕ್ಷಕರು ಅರಿತು ಮಕ್ಕಳಿಗೆ ನಿತ್ಯ ಮೌಲ್ಯಯುತ ಶಿಕ್ಷಣ ನೀಡಬೇಕು ಎಂದರು.

ಅಧ್ಯಕ್ಷತೆಯನ್ನು ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಅಧ್ಯಕ್ಷ ಎಂ.ಡಿ. ಬಟ್ಟೂರ ವಹಿಸಿದ್ದರು. ಡಾ. ಎಸ್.ಸಿ. ಚವಡಿ, ಪಿ.ಎ. ವಂಟಕರ, ಪ್ರಧಾನ ಗುರುಮಾತೆ ಫಾತೀಮಾ ಖವಾಸ ಇದ್ದರು.

**ಡಾ. ಅಂಬೇಡ್ಕರರ ಪುತ್ಥಳಿ ಅನಾವರಣ ಕಾರ್ಯವನ್ನು ನಾಡ ಹಬ್ಬದಂತೆ ಆಚರಿಸಲು ನಿರ್ಧಾರ**

# ಸಮುದಾಯದ ಕನಸು ನನಸಾಗುವ ಕಾಲ ಸನ್ನಿಹಿತ

■ವಿಜಯಸಾಕ್ಷಿ ಸುದ್ದಿ, ಡಂಬಳ

ಡಂಬಳ ಗ್ರಾಮ ಪಂಚಾಯಿತಿ ಆವರಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ ಅವರ ಪುತ್ಥಳಿ ಅನಾವರಣ ಮಾಡಬೇಕು ಎನ್ನುವ ಹಲವು ವರ್ಷಗಳ ದಲಿತ ಸಮುದಾಯದ ಮತ್ತು ಅಂಬೇಡ್ಕರ ಅಭಿಮಾನಿಗಳ ಕನಸು ಶೀಘ್ರದಲ್ಲೆ ನನಸಾಗುವ ಕಾಲ ಕೂಡಿ ಬಂದಿದ್ದು, ಡಂಬಳ ಗ್ರಾಮದ ಪ್ರವಾಸಿ ಮಂದಿರದಲ್ಲಿ ಶನಿವಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಠ ಪಂಗಡದ ಸಮುದಾಯದ ಮುಖಂಡರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಸಲಾಯಿತು.



ಜನವರಿ ಅಥವಾ ಮುಂದಿನ ತಿಂಗಳ ಫೆಬ್ರುವರಿ ಮೂರನೇ ವಾರದೊಳಗೆ ಅಂಬೇಡ್ಕರ ಪುತ್ಥಳಿ ನಿರ್ಮಾಣ ಮಾಡುವ ಕುರಿತು ಸಭೆಯಲ್ಲಿ ತೀರ್ಮಾನ ಮಾಡಲಾಯಿತು. ಕಾರ್ಯಕ್ರಮವನ್ನು ಗ್ರಾಮ ಪಂಚಾಯಿತಿ ಆಡಳಿತ ಮಂಡಳಿಯ ನಿರ್ಣಯದಂತೆ ಎಲ್ಲಾ ಸದಸ್ಯರನ್ನೊಳಗೊಂಡು ಸಚಿವರು, ಶಾಸಕರು, ಮಾಜಿ ಶಾಸಕರು ಸೇರಿದಂತೆ ಹಲವು ಗಣ್ಯರನ್ನು ಆಹ್ವಾನಿಸುವ ಕುರಿತು ಚರ್ಚೆಗಳು ನಡೆದವು. ವಿಶೇಷವಾಗಿ ಕಾರ್ಯಕ್ರಮ ಮಾಡುವ ಸ್ಥಳ, ಕುಂಭ ಮೆರವಣಿಗೆ, ಊಟದ ವ್ಯವಸ್ಥೆ, ನೀರು ನಿರ್ವಹಣೆ, ವೇದಿಕೆಯ ವ್ಯವಸ್ಥೆ, ಖರ್ಚು-ವೆಚ್ಚ ಸೇರಿದಂತೆ ಹಲವು ಮಹತ್ವದ ವಿಷಯಗಳನ್ನು ಸಭೆಯಲ್ಲಿ ಚರ್ಚೆ ಮಾಡಲಾಯಿತು.

ವಿಶೇಷವಾಗಿ ಗ್ರಾ.ಪಂ ಆವರಣದಲ್ಲಿ ಅಂಬೇಡ್ಕರರ ಪುತ್ಥಳಿ ನಿರ್ಮಾಣದ ಕುರಿತು ಒಮ್ಮತದಿಂದ ಠರಾವು ಪಾಸು ಮಾಡಲು ಗಟ್ಟಿ ನಿರ್ಧಾರ ಕೈಗೊಂಡ ಎಲ್ಲಾ ಸದಸ್ಯರಿಗೂ ಸಮುದಾಯದ ಪರವಾಗಿ ಅಭಿನಂದನೆ ಸಲ್ಲಿಸಲಾಯಿತು. ಸಮುದಾಯದ ಹಿರಿಯರಾದ ಮರಿತಿಮ್ಮಪ್ಪ ಆದಮ್ಮನವರ, ಕೆ.ಎನ್. ದೊಡ್ಡಮನಿ, ಡಿ.ಪ್ರಸಾದ, ಮರಿಯಪ್ಪ ಸಿದ್ದಣ್ಣವರ, ಗವಿಸಿದ್ದಪ್ಪ ಬಿಸನಹಳ್ಳಿ, ವಿರೂಪಾಕ್ಷಪ್ಪ ಯಲಿಗಾರ, ನಾಗಪ್ಪ ತಳವಾರ ಅವರ ನೇತೃತ್ವದಲ್ಲಿ ನಡೆಸಲಾಯಿತು.

ಸಭೆಯಲ್ಲಿ ಮುಖಂಡರಾದ ದೇವಪ್ಪ ತಳಗೇರಿ, ಗ್ರಾ.ಪಂ ಸದಸ್ಯ ರಾಕೇಶ ಅಡವಿ, ಮಾರುತಿ ಬಿಸನಹಳ್ಳಿ, ಮುಖಂಡ ಹನಮಪ್ಪ ಶಿವಪ್ಪ ಹಾದಿಮನಿ, ಕೃಷ್ಣ ಕಟ್ಟೆಣ್ಣವರ, ಉಪನ್ಯಾಸಕರಾದ ಮಂಜುನಾಥ ಬಿಸನಹಳ್ಳಿ, ಗವಿಸಿದ್ದಪ್ಪ ಹಾದಿಮನಿ, ಲಕ್ಷ್ಮಣ ದೊಡ್ಡಮನಿ, ನಾಗಪ್ಪ ಕೊರವರ, ವಿಜಯಕುಮಾರ ಹಾದಿಮನಿ, ವೆಂಕಟೇಶ ತಳವಾರ, ಆದಿತ್ಯ ಗದಗಿನ, ಅಶೋಕ ತಳಗೇರಿ, ದೇವಿಂದ್ರಪ್ಪ ಪೂಜಾರ, ವಿನಾಯಕ ಕಟ್ಟೆಣ್ಣವರ, ಕುಮಾರ ಗೌಡಣ್ಣವರ, ಸುರೇಶ ದೊಡ್ಡಮನಿ, ಹನಮಪ್ಪ ಕೊರವರ, ಷಣ್ಮುಖಪ್ಪ ಒಂಟೆಲಭೋವಿ, ಯಮನಪ್ಪ ಹಾನಿ, ಗೋಪಾಲ ಕದಡಿ, ಫಕ್ಕಿರಪ್ಪ ಆನಿ, ಲೆಂಕೆಪ್ಪ ಕದಡಿ, ಚೇತನ ಸಿದ್ದಣ್ಣವರ, ಶಂಖರಲಿಂಗಪ್ಪ ಪೂಜಾರ ಮುಂತಾದವರಿದ್ದರು. ಶಿಕ್ಷಕ ಮಲ್ಲಿಕಾರ್ಜುನ ಗೌಡಣ್ಣವರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ನೂತನ ಅಧ್ಯಕ್ಷರಾಗಿ ಶಾಂತಪ್ಪ ಆಡಿನ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ದಲಿತ ಸಾಹಿತ್ಯ ಅಕಾಡೆಮಿ ದೆಹಲಿ ಇವರು ಕರ್ನಾಟಕ ರಾಜ್ಯಾಧ್ಯಕ್ಷ ಎಚ್.ಎಮ್. ಕುಂದರಗಿಯವರ ಆದೇಶದ ಮೇರೆಗೆ ಭಾರತೀಯ ದಲಿತ ಸಾಹಿತ್ಯ ಅಕಾಡೆಮಿ ಗದಗ ಜಿಲ್ಲೆಯ ರೋಣ ತಾಲೂಕು ಅಧ್ಯಕ್ಷರನ್ನಾಗಿ ಶಿಕ್ಷಕ, ಸಾಹಿತಿ ಶಾಂತಪ್ಪ ಕಲ್ಲಪ್ಪ ಆಡಿನ ಇವರನ್ನು ನೇಮಕ ಮಾಡಿ ಭಾರತೀಯ ದಲಿತ ಸಾಹಿತ್ಯ ಅಕಾಡೆಮಿ ಗದಗ ಜಿಲ್ಲಾಧ್ಯಕ್ಷ ಬಸವರಾಜ ಎಮ್.ಕಡೇಮನಿ ಆದೇಶ ಹೊರಡಿಸಿದ್ದಾರೆ.

ಸದರಿಯವರು ಈಗಾಗಲೇ ಗದಗ ಜಿಲ್ಲೆಯಲ್ಲಿ ದಲಿತ ಪರ, ಡಾ. ಬಿ.ಆರ್. ಅಂಬೇಡ್ಕರರ ತತ್ವ ಸಿದ್ಧಾಂತಗಳ ಮೇಲೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಸೇವೆಗಳನ್ನು ಪರಿಗಣಿಸಿ ಇವರನ್ನು ಭಾರತೀಯ ದಲಿತ ಸಾಹಿತ್ಯ ಅಕಾಡೆಮಿ ಗದಗ ಜಿಲ್ಲಾ ರೋಣ ತಾಲೂಕು ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ ಎಂದು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

### ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ

# ಯುವಕರು 'ವಿವೇಕ'ದಿಂದ ಸಾಧನೆ ಮಾಡಲಿ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಯುವಜನಾಂಗ ಜಿಡ್ಡುಗಟ್ಟಿದ ವಾತಾವರಣದಿಂದ, ಆಲಸ್ಯದಿಂದ ಹೊರಬರಬೇಕು. ಚೈತನ್ಯದ ಚಿಲುಮೆಯಾಗಿ ಅಧ್ಯಯನಶೀಲರಾಗಬೇಕು, ವಿವೇಕದಿಂದ ಸಾಧನೆಯ ಮಾರ್ಗ ಕಂಡುಕೊಳ್ಳಬೇಕೆಂದು ಬಿಜಾಪೂರ ರಾಮಕೃಷ್ಣ ಆಶ್ರಮದ ಪೂಜ್ಯ ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಹೇಳಿದರು.

ಅವರು ಶನಿವಾರ ಗದುಗಿನ ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಏರ್ಪಡಿಸಿದ್ದ ಶ್ರೀ ಸ್ವಾಮಿ ವಿವೇಕಾನಂದರ 164ನೇ ಜಯಂತಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಇಂದಿನ ಯುವ ಜನಾಂಗ ಅನ್ಯ ಕಾರ್ಯಗಳಲ್ಲಿಯೇ ಕಾಲಹರಣ ಮಾಡುತ್ತಿದ್ದು, ಅದರ ಬದಲು ಅಧ್ಯಯನಶೀಲರಾಗಬೇಕು. ಜ್ಞಾನದ ದಿಗಂತವನ್ನು ಹೆಚ್ಚಿಸುವ, ಜೀವನದ ಪಥವನ್ನೇ ಬದಲಿಸಬಲ್ಲ ಅತ್ಯಮೂಲ್ಯವಾದ ಗ್ರಂಥಗಳನ್ನು ಶ್ರದ್ಧೆಯಿಂದ ಅಧ್ಯಯನ ಮಾಡಿದಲ್ಲಿ ಬದುಕಿನಲ್ಲಿ ಗುಣಾತ್ಮಕತೆ ಬರಲು ಸಾಧ್ಯ ಎಂದರು.



ನರೇಂದ್ರನಾಥ ದತ್ತ ವಿವೇಕದಿಂದ ವಿವೇಕಾನಂದ ಆಗಿ ಜಗದ್ವಿಖ್ಯಾತಿ ಗಳಿಸಿದರು. ಗುರುಗಳಾದ ರಾಮಕೃಷ್ಣ ಪರಮಹಂಸರು ತೋರಿದ ಜ್ಞಾನದ ಬೆಳಕಿನಲ್ಲಿ ಬೆಳೆದ ವಿವೇಕಾನಂದರು, ದೇಶದ ಮೂಲೆ ಮೂಲೆಗೂ ಸಂಚರಿಸಿ ಎಲ್ಲರಿಗೂ ಸ್ಫೂರ್ತಿ ತುಂಬುತ್ತಿದ್ದರು. 1893ರಲ್ಲಿ ಚಿಕಾಗೋದಲ್ಲಿ ಸ್ವಾಮಿ ವಿವೇಕಾನಂದರು ಮಾಡಿದ ಭಾಷಣ ಇಂದಿಗೂ ವಿಖ್ಯಾತಿ ಉಳಿಸಿಕೊಂಡಿದೆ. ರಾಷ್ಟ್ರಪ್ರೇಮ, ಭಾರತೀಯ ಸಂಸ್ಕೃತಿಯ ಆಳವಾದ ಜ್ಞಾನ ಹೊಂದಿದ್ದ ವಿವೇಕಾನಂದರು ಇಂದಿಗೂ ಎಂದಿಗೂ ಎಲ್ಲರಿಗೂ ಸ್ಫೂರ್ತಿ ಎಂದರು.


ನಾವು ಸಾಧಿಸುವ ಮಾರ್ಗ ಯಾವುದು, ಮುಟ್ಟಬೇಕಾದ ಗುರಿ ಯಾವುದು ಎಂದರಿತು ಅದನ್ನು ಸಾಧಿಸಲು ಮುನ್ನಡೆಯಬೇಕು. ಸಾಧಿಸಬೇಕೆಂಬ ಬೀಜ ಎಲ್ಲರಲ್ಲಿಯೂ ಇದೆ, ಅದು ಮರ ಆಗಲು ನೀರು-ಗೊಬ್ಬರ ಹಾಕಬೇಕು. ಹಾಗೇ ಸಾಧನೆಗೆ ಕಠಿಣ ಪರಿಶ್ರಮ ಬೇಕು. ಭಾರತೀಯ ಮಕ್ಕಳಿಗೆ ಇರುವಷ್ಟು ಜ್ಞಾನ, ಸಾಧನೆಯ ಮಾರ್ಗ ಇತರ ದೇಶದ ಮಕ್ಕಳಿಗೆ ಇಲ್ಲ. ಆದರೆ ಭಾರತೀಯ ಮಕ್ಕಳು ಸ್ಥಿಮಿತ ಪರಿಧಿಯನ್ನು ಬಿಟ್ಟು ಆಚೆ ಬಂದರೆ ಮಾತ್ರ ಜ್ಞಾನ ಸಾಧನೆ ಹೊಂದಲು ಸಾಧ್ಯ. ಅಂತಹ ಸಾಧನೆಗೆ ವಿವೇಕಾನಂದರ ಈ ಜಯಂತಿ ದಿನ ಯುವ ಜನಾಂಗ ಸಂಕಲ್ಪಬದ್ಧರಾಗಲಿ ಎಂದರು.

ವೇದಿಕೆಯ ಮೇಲೆ ಪೂಜ್ಯ ಸ್ವಾಮಿ ಜಗನ್ನಾಥಾನಂದಜೀ, ಪೂಜ್ಯ ಸ್ವಾಮಿ ಸುಮೇದಾನಂದಜೀ ಹಾಗೂ ಪೂಜ್ಯ ಸ್ವಾಮಿ ಶಿವಪ್ರಿಯಾನಂದಜೀ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಗಣ್ಯ ಮಹನೀಯರು, ಆಶ್ರಮದ ಎಲ್ಲ ಸೇವಾ ಸಮಿತಿಯ ಸದ್ಭಕ್ತರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಶ್ರೀ ಸ್ವಾಮಿ ವಿವೇಕಾನಂದರ 164ನೇ ಜಯಂತಿ ಅಂಗವಾಗಿ ಆಶ್ರಮದಲ್ಲಿ ಬೆಳಿಗ್ಗೆ ಆರತಿ, ಪ್ರಾರ್ಥನೆ, ಪೂಜೆ, ಶಿವಸಹಸ್ರನಾಮ ಪಾರಾಯಣ ಹಾಗೂ ಭಜನೆ, ಹೋಮ, ಮಧ್ಯಾಹ್ನ ಉಪನ್ಯಾಸ, ಮಹಾಪ್ರಸಾದ, ಸಂಜೆ ಆರತಿ ಮತ್ತು ಪ್ರಸಾದ ಕಾರ್ಯಕ್ರಮಗಳು ಜರುಗಿದವು.

> ಸ್ವಾಮಿ ವಿವೇಕಾನಂದರ ಮಾತುಗಳು, ಬೋಧನೆಗಳು ಇಂದಿಗೂ ಪ್ರಸ್ತುತ. ವಿವೇಕಾನಂದರ ಚಿಂತನೆಗಳು, ಆದರ್ಶಗಳು ಯುವ ಜನರ ಮೇಲೆ ಆಳವಾದ ಪ್ರಭಾವವನ್ನು ಬೀರುತ್ತವೆ. ಇಂದು ಅವರ ಜಯಂತಿಯನ್ನು ಆಚರಿಸುತ್ತಿದ್ದು, ವಿವೇಕಾನಂದರ ತತ್ವ-ಸಿದ್ಧಾಂತಗಳನ್ನು, ಆದರ್ಶಗಳನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳದಿದ್ದರೆ ಇಂತಹ ಜಯಂತಿಗಳನ್ನು ಎಷ್ಟು ಮಾಡಿದರೂ ವ್ಯರ್ಥ. ಜಯಂತಿಗಳು ಸಾರ್ಥಕತೆ ಪಡೆಯಬೇಕಾದರೆ ಜಯಂತಿಯ ಉದ್ದೇಶ ಸಾಕಾರಗೊಳ್ಳಬೇಕು ಎಂದು ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಹೇಳಿದರು.

# ಶೌಚಾಲಯದ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಹುಯಿಳಗೊಳ ಗ್ರಾಮದ ಬೀರಲಿಂಗೇಶ್ವರ ದೇವಸ್ಥಾನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಡಿಯಲ್ಲಿ ಜ್ಞಾನ ವಿಕಾಸ ಕಾರ್ಯಕ್ರಮದ ಸೃಜನಶೀಲ ಕಾರ್ಯಕ್ರಮದಲ್ಲಿ ಶೌಚಾಲಯ ರಚನೆ ಮಾಡಿದ ಸದಸ್ಯರಿಗೆ ಶೌಚಾಲಯ ಸೀಟ್ ವಿತರಣೆ ಕಾರ್ಯಕ್ರಮವನ್ನು ಜಿಲ್ಲಾ ನಿರ್ದೇಶಕರಾದ ಕೇಶವ ದೇವಾಂಗ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜ್ಞಾನವಿಕಾಸ ಕಾರ್ಯಕ್ರಮ ಸದಸ್ಯರಲ್ಲಿ ಜ್ಞಾನವನ್ನು ಹೆಚ್ಚಿಸುತ್ತದೆ, ಸದಸ್ಯರಿಗೆ ಕೌಶಲ್ಯ ಕಲಿಸುತ್ತದೆ, ಸ್ವ-ಉದ್ಯೋಗ ಮಾಡಲು ವೇದಿಕೆಯನ್ನು ರೂಪಿಸುತ್ತದೆ ಮತ್ತು ಸದಸ್ಯರು ಪ್ರಗತಿಯ ಜೀವನ ಕೂಡ ರೂಪಿಸಿಕೊಳ್ಳಬಹುದು ಎಂದು ಮಾಹಿತಿ ನೀಡಿದರು.

ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮಂಜುನಾಥ ಸಜ್ಜನರ ಮಾತನಾಡಿ, ಸದಸ್ಯರಿಗೆ ಶೌಚಾಲಯ ಬಳಕೆಯಿಂದ ಆಗುವ ಪ್ರಯೋಜನ ಮತ್ತು ಶೌಚಾಲಯ ಇಲ್ಲದಿದ್ದರೆ ಆಗುವ ತೊಂದರೆ ಕುರಿತು, ಬಯಲಲ್ಲಿ ಶೌಚ ಮಾಡುವುದರಿಂದ ಆಗುವ ಸಮಸ್ಯೆಗಳ ಕುರಿತು ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿವಪುತ್ರವ್ವ ಮಾಗಡಿ ವಹಿಸಿದ್ದರು. ನವಜೀವನ ಸಮಿತಿ ಅಧ್ಯಕ್ಷರಾದ ತಿಪ್ಪಣ್ಣ ಗಂಗಪ್ಪನವರ, ತಾಲೂಕಿನ ಕ್ಷೇತ್ರ ಯೋಜನಾಧಿಕಾರಿ ಉಮಾ ಎನ್.ಜಿ ಹಾಗೂ ಶ್ರೀನಿವಾಸ್ ಬೆಟದೂರ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜ್ಞಾನ ವಿಕಾಸ ಸಮನ್ವಯಧಿಕಾರಿ ಗಂಗಮ್ಮ ಮರಾಠಿ, ವಲಯ ಮೇಲ್ವಿಚಾರಕರಾದ ಮಲ್ಲಿಕಾರ್ಜುನ, ಸೇವಾ ಪ್ರತಿನಿಧಿಗಳಾದ ಸುಪ್ರಿಯಾ, ಕವಿತಾ ಹಾಗೂ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

## ನೂತನ ಭೋಜನ ಕೊಠಡಿ ಉದ್ಘಾಟನೆ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಹಾತಲಗೇರಿ ರಸ್ತೆಯ ವಿವೇಕಾನಂದ ನಗರದ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್‌ನ ಗಾಣಿಗ ಭವನದಲ್ಲಿ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರ 20 ಲಕ್ಷ ರೂ. ಅನುದಾನದಲ್ಲಿ ನೂತನವಾಗಿ ನಿರ್ಮಿಸಿರುವ ಭೋಜನ ಕೊಠಡಿ, ಕಟ್ಟಡದ ಮೇಲ್ಛಾವಣಿಯಲ್ಲಿ ಅಳವಡಿಸಿರುವ ಸೋಲಾರ್ ವಿದ್ಯುತ್ ಘಟಕದ ಉದ್ಘಾಟನೆ ಹಾಗೂ 2026ನೇ ಸಾಲಿನ ದಿನದರ್ಶಿಕೆ ಬಿಡುಗಡೆ ಕಾರ್ಯಕ್ರಮ ಜ. 11ರಂದು ಬೆಳಿಗ್ಗೆ 11ಕ್ಕೆ ಜರುಗಲಿದೆ.

ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಉದ್ಘಾಟಿಸಿ, 2026ನೇ ಸಾಲಿನ ದಿನದರ್ಶಿಕೆ ಬಿಡುಗಡೆಗೊಳಿಸುವರು. ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್‌ನ ಅಧ್ಯಕ್ಷ ಬಸವರಾಜ ಬಿಂಗಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಟ್ರಸ್ಟ್‌ನ ಷಣ್ಮುಖಪ್ಪ ಬಡ್ನಿ, ಬಿ.ಬಿ. ಐನಾಪೂರ, ಮುರುಘರಾಜೇಂದ್ರ ಬಡ್ನಿ, ಸುರೇಶ ವಾಯ್. ಮರಳಪ್ಪನವರ, ಬಸವರಾಜ ಎಸ್.ಮೇಟಿ, ಗಿರಿಯಪ್ಪ ಎಚ್.ಅಸೂಟಿ, ಕೆಂಚಪ್ಪ (ದಶರಥ) ರಾ. ಗಾಣಿಗೇರ, ಗಂಗಾಧರ ವಿ.ಗಾಣಿಗೇರ, ರಮೇಶ ಎಮ್.ಮಂದಾಲಿ, ಹಾಲಪ್ಪ ಸಿ.ಲಕ್ಕುಂಡಿ (ಬಣವಿ), ಫಕ್ಕೀರೇಶ ಎಸ್.ಸಿಂಧಗಿ, ಬಸವರಾಜ ಎಸ್.ಸುಂಕದ, ಶರಣಗೌಡ ಪವಾಡಿಗೌಡ್ರು, ಬಿ.ಎಸ್. ವಡವಟ್ಟಿ, ನಿಂಗಪ್ಪ ಎಸ್.ಕೆಂಗಾರ, ಅಮರೇಶ ಎಸ್.ಹಾದಿ, ಶ್ರೀಕಾಂತ ಸಿ.ಲಕ್ಕುಂಡಿ, ಆಯ್.ಎಮ್. ಕಿರೇಸೂರ, ಬಸವಂತಪ್ಪ ಜಿ.ನವಲಳ್ಳಿ, ಬಸವರಾಜ ಎಮ್.ನವಲಗುಂದ, ತೋಟಪ್ಪ ವಿ.ಗಾಣಿಗೇರ, ಶಿವಣ್ಣ ಬಿ.ಹಿಟ್ಟಳ್ಳಿ, ಸೋಮನಗೌಡ ಕೆ.ಪಾಟೀಲ, ಪ್ರಕಾಶ ವಿ.ಮುಧೋಳ, ಅಶೋಕ ಕೆ.ಮಂದಾಲಿ, ಜಗದೀಶ ವಿ.ಬೆಳವಟಗಿ, ಪುಲಕೇಶಗೌಡ ಪಾಟೀಲ, ಸಂದೀಪ ಬಿ.ಕಪ್ಪತ್ತನವರ, ಎಚ್.ಬಿ. ಕೊರಗಲ್ ಪಾಲ್ಗೊಳ್ಳುವರು ಎಂದು ಟ್ರಸ್ಟ್‌ನ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.ಆರ್. ಪಾಟೀಲರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಏರ್ಪಡಿಸಿದ್ದ ಶ್ರೀ ಸ್ವಾಮಿ ವಿವೇಕಾನಂದರ 164ನೇ ಜಯಂತಿ ಕಾರ್ಯಕ್ರಮದಲ್ಲಿ ಗದಗ ಮಾಜಿ ಶಾಸಕರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಬಿಜಾಪೂರ ರಾಮಕೃಷ್ಣ ಆಶ್ರಮದ ಪೂಜ್ಯ ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಅವರು ಡಿ.ಆರ್. ಪಾಟೀಲರಿಗೆ ಶಾಲು ಹೊದೆಸಿ ಫಲಪುಷ್ಪ ನೀಡಿ ಆಶೀರ್ವದಿಸಿದರು.

ಸರಳ, ಸಜ್ಜನಿಕೆ ಹಾಗೂ ಸಂತ ರಾಜಕಾರಣಿ ಎಂದೇ ಜನಮನದಲ್ಲಿ ನೆಲೆಸಿರುವ ಡಿ.ಆರ್. ಪಾಟೀಲ ಅವರು ಸಮಾಜಮುಖಿ, ಜನಮುಖಿಯಾಗಿ ಕಾರ್ಯ ಮಾಡಿದವರು. ಧಾರ್ಮಿಕ ಮನೋಭಾವದ ಅವರು ನಮ್ಮ ಈ ಆಶ್ರಮ ಸುಂದರವಾಗಿ ರೂಪುಗೊಳ್ಳುವಲ್ಲಿ ಕೊಡುಗೆ ನೀಡಿದ್ದಾರೆ. ಆಶ್ರಮದ ಸಕಲ ಸದ್ಭಕ್ತರ ಪರವಾಗಿ ಸನ್ಮಾನಿಸಲು ಅತೀವ ಸಂತೋಷ ಎನ್ನಿಸುವದು ಎಂದು ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಬಣ್ಣಿಸಿದರು.

ಪೂಜ್ಯ ಸ್ವಾಮಿ ಜಗನ್ನಾಥಾನಂದಜೀ, ಪೂಜ್ಯ ಸ್ವಾಮಿ ಸುಮೇದಾನಂದಜೀ ಹಾಗೂ ಪೂಜ್ಯ ಸ್ವಾಮಿ ಶಿವಪ್ರಿಯಾನಂದ ಜೀ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಗಣ್ಯರು, ಆಶ್ರಮದ ಎಲ್ಲ ಸೇವಾ ಸಮಿತಿಯ ಸದ್ಭಕ್ತರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ಬಿಜೆಪಿ ಪಕ್ಷದಿಂದ 'ಓಂಕಾರ' ಮಂತ್ರ ಪಠಣ

# 'ಸೋಮನಾಥ ಪರ್ವ'ದಲ್ಲಿ ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶನಿವಾರ ಬೆಳಿಗ್ಗೆ ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ಬಿಜೆಪಿ ಪಕ್ಷದಿಂದ ಸೋಮನಾಥ ಸ್ವಾಭಿಮಾನ ಪರ್ವ ಕಾರ್ಯಕ್ರಮದನ್ವಯ ಓಂಕಾರ ಮಂತ್ರದ ಜಪಿಸಲಾಯಿತು.



ಈ ವೇಳೆ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, 2026ಕ್ಕೆ ಗುಜರಾತಿನ ಪ್ರಸಿದ್ಧ ಸೋಮನಾಥ ದೇವಾಲಯದ ಮೇಲೆ ಘಜನಿ ಮಹಮದ್ ದಾಳಿ ನಡೆಸಿ 1000 ವರ್ಷವಾಯಿತು. ಈ ದಾಳಿಯು ಅಂದು (ಜನವರಿ 8, 9 ಮತ್ತು 10) ಮೂರು ದಿನಗಳ ಕಾಲ ನಡೆದಿತ್ತು. ನಂತರದ ಅನೇಕ ದಾಳಿಗಳು ದೇವಸ್ಥಾನ ಮುಟ್ಟಲಾಗಲಿಲ್ಲ. ಭಾರತದ ಸಾಂಸ್ಕೃತಿಕ ಏಕತೆ, ಪ್ರಜ್ಞೆಯನ್ನು ಬಲಪಡಿಸಿದವು. ಸೋಮನಾಥ ದೇವಸ್ಥಾನ ಮತ್ತೆ ಗತವೈಭವದೊಂದಿಗೆ ಮರು ನಿರ್ಮಾಣಗೊಂಡು ಈಗ 75 ವರ್ಷವಾಯಿತು. ಈ ದಿನದ ಸ್ಮರಣಾರ್ಥ ದೇಶದ ಎಲ್ಲಾ ಶಿವಾಲಯಗಳಲ್ಲಿ ಪೂಜೆ, ಆರತಿ, ಓಂಕಾರ ಮಂತ್ರ ಜಪಿಸಲು ನಿರ್ಧರಿಸಲಾಗಿದೆ.

ಎಲ್ಲಾ ದೇಶವಾಸಿಗಳು ಈ ಜನ-ಅಭಿಯಾನದಲ್ಲಿ ಪಾಲ್ಗೊಂಡು, ಈ ಮೂರು ದಿನಗಳಲ್ಲಿ ತಮ್ಮ ಹತ್ತಿರದ ಶಿವಾಲಯಗಳಲ್ಲಿ ಮಂತ್ರ ಪಠಣದಲ್ಲಿ ಭಾಗವಹಿಸುವುದು ಇದರ ಉದ್ದೇಶವಾಗಿದೆ. ಅದರೊಂದಿಗೆ, ಸೋಮನಾಥ ದೇವಾಲಯದ ಅಖಂಡತೆಯನ್ನು ಕಾಪಾಡಲು ಪ್ರಾರ್ಥನೆ ಮತ್ತು ಸಂಕಲ್ಪವನ್ನು ಮಾಡಬೇಕು ಎಂದು ಹೇಳಿದರು.

> ಈ ಬಗ್ಗೆ ಜನತೆ ಸಹನಶೀಲತೆ, ಏಕತೆ, ಅಖಂಡತೆ, ನಿರಂತರತೆ, ಪುನರುತ್ಥಾನದ ಯಶೋಗಾಥೆಯನ್ನು ನೆನಪಿಸಿಕೊಳ್ಳಲು ಕೇಂದ್ರ ಸರ್ಕಾರ ಈ ವರ್ಷ 'ಸೋಮನಾಥ ಪರ್ವ'ವನ್ನು ಆಯೋಜಿಸಲು ನಿಶ್ಚಯಿಸಲಾಗಿದೆ. ಜನವರಿ 11ರಂದು ಪ್ರಧಾನಮಂತ್ರಿಯವರ ನೇತೃತ್ವದಲ್ಲಿ ಸೋಮನಾಥ ದೇವಾಲಯದಲ್ಲಿ 'ಸಹಸ್ರ ಸಂಕಲ್ಪ ಯಾತ್ರೆ' ಆಯೋಜಿಸಲಾಗಿದ್ದು, 'ಸೋಮನಾಥ ಸ್ವಾಭಿಮಾನ ಪರ್ವ'ವನ್ನು ವರ್ಷವಿಡೀ ಆಚರಿಸಲಾಗುವುದು ಎಂದು ಶಾಸಲ ಡಾ. ಚಂದ್ರು ಲಮಾಣಿ ಹೇಳಿದರು.

ಈ ಸಂದರ್ಭದಲ್ಲಿ ಶಿರಹಟ್ಟಿ ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಅನಿಲ ಮುಳಗುಂದ, ವಿಜಯಕುಮಾರ ಹತ್ತಿಕಾಳ, ಮಹಾದೇವಪ್ಪ ಅಣ್ಣಿಗೇರಿ, ಮಂಜುಳಾ ಗುಂಜಳ, ಕವಿತಾ ಶೇರಸೂರಿ, ಎಮ್.ಆರ್. ಪಾಟೀಲ, ನಿಂಗಪ್ಪ ಬನ್ನಿ, ಗಂಗಾಧರ ಮೆಣಸಿನಕಾಯಿ, ಚನ್ನವೀರಗೌಡ ಪಾಟೀಲ, ಶಿವನಗೌಡ ಕಂಠಿಗೌಡ್ರ, ಚನ್ನವೀರಪ್ಪ ಹೂಗಾರ, ಈರಣ್ಣ ಪೂಜಾರ, ಪ್ರವೀಣ ಬೋಮಲೆ, ರಾಜಣ್ಣ ಅಂದಲಗಿ, ನೀಲಪ್ಪ ಕರ್ಜಕಣ್ಣವರ, ರಾಜಶೇಖರ ಶಿರಹಟ್ಟಿ, ವಿಜಯ ಮೆಕ್ಕಿ, ಥಾವರಪ್ಪ ಲಮಾಣಿ, ಸಂತೋಷ ಜಾವೂರ, ರಮೇಶ ಹಾಳದೋಟದ, ಕಲ್ಲಪ್ಪ ಹಡಪದ, ವಿಶಾಲ ಬಟಗುರ್ಕಿ, ಪ್ರವೀಣ ಮುದಗಲ್, ಮಂಜುನಾಥ ಗಜಾಕೋಶ, ಯಶವಂತ ಭಜಂತ್ರಿ, ಉಳವೇಶಗೌಡ ಪಾಟೀಲ, ರಾಘವೇಂದ್ರ ಪೂಜಾರ, ಬಸವರಾಜ ಬಂಡಾರಿಮಠ ಸಮೀರ ಪೂಜಾರ ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.

# ಬಿಜೆಪಿಗೆ ಸದ್ಯ ಮಾಡಲು ಕೆಲಸವಿಲ್ಲ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ



ಬಳ್ಳಾರಿ, ಕೊಪ್ಪಳ, ಹುಬ್ಬಳ್ಳಿ ಗಲಾಟೆಯ ಘಟನೆಗಳನ್ನು ರಾಜಕೀಯ ಲಾಭಕ್ಕೆ ಜಟಿಲಗೊಳಿಸಿ ಹಲ್ಲೆಯ ಆರೋಪ ಮಾಡುತ್ತಿರುವದು ಬಿಜೆಪಿಯ ಹತಾಶೆಯ ಮನಸ್ಥಿತಿಯ ಕಾರಣಕ್ಕೆ ಬಂದವುಗಳು ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಎಂ.ಗೊಂಡಬಾಳ ಬೇಸರ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬಿಜೆಪಿಗೆ ಸದ್ಯ ಮಾಡಲು ಕೆಲಸವಿಲ್ಲ. ದೇಶದಲ್ಲಿ ಈಗಾಗಲೇ ಸುಳ್ಳು ಹೇಳುವ ಮೂಲಕ, ಜನ ಮತ್ತು ವ್ಯವಸ್ಥೆಯನ್ನು ಕಲುಷಿತಗೊಳಿಸಿ ಅಧಿಕಾರ ಪಡೆದುಕೊಂಡಿದ್ದು, ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರದ ಸಮರ್ಥ ಆಡಳಿತ ಅರ್ಥವಾಗುತ್ತಿರುವ ಹಿನ್ನೆಲೆಯಲ್ಲಿ ಮುಂದೆ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತದೆ ಎಂಬ ಹತಾಶೆಯಿಂದ ಇಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

ಕೊಪ್ಪಳದ ರೈಲ್ವೆ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಸೋಮಣ್ಣ ಅವರ ಮೇಲೆ ಕಾಂಗ್ರೆಸ್ ಕಾರ್ಯಕರ್ತರು ಹಲ್ಲೆ ಮಾಡಿದ್ದಾರೆ. ಇದನ್ನು ಸಚಿವ ಶಿವರಾಜ ತಂಗಡಗಿ, ಸಂಸದ ರಾಜಶೇಖರ ಹಿಟ್ನಾಳ ಮತ್ತು ಶಾಸಕ ರಾಘವೇಂದ್ರ ಹಿಟ್ನಾಳ ಅವರೇ ಮಾಡಿಸಿದ್ದಾರೆ ಎಂದು ಹೋರಾಟಕ್ಕೆ ಇಳಿದಿದ್ದಾರೆ. ಇದೆಲ್ಲಾ ಅತ್ಯಂತ ಕ್ಷುಲ್ಲಕ ಮತ್ತು ಅಧಿಕಾರದ ಹಪಾಹಪಿತನಕ್ಕೆ ಸಾಕ್ಷಿಯಾಗಿದೆ. ಇಂತಹ ಕೆಲಸ ಮಾಡುವುದೇ ಬಿಜೆಪಿಯ ಹಳೆಯ ಚಾಳಿ. ಶಿಷ್ಟಾಚಾರ ಉಲ್ಲಂಘನೆ ಆಗಿದ್ದಕ್ಕೆ ಸಹಜವಾಗಿ ಕಾರ್ಯಕರ್ತರಿಗೆ ನೋವಾಗಿ ಕೂಗಾಡಿದ್ದಕ್ಕೆ ಬಡಿದೇ ಬಿಟ್ಟರು ಎಂದು ಹೇಳುವದು ಸರಿಯಲ್ಲ ಎಂದಿದ್ದಾರೆ.

ಇನ್ನು ಬಳ್ಳಾರಿಯಲ್ಲಿ ಜನಾರ್ಧನರಡ್ಡಿ ಅವರು ಕಾಲಿಡುತ್ತಲೇ ಜಗಳ, ಗಲಾಟೆಗಳು ಪ್ರಾರಂಭವಾಗಿದ್ದು, ಸದಾ ತಮಗೆ ಸಂಬಂಧವೇ ಇಲ್ಲದ ಮಾತುಗಳಿಂದ ಪ್ರಚಾರದಲ್ಲಿ ಇರಲು ಪ್ರಯತ್ನ ಮಾಡುವ ಜನಾರ್ಧನ ರಡ್ಡಿಯವರಿಂದಲೇ ಬಳ್ಳಾರಿ ಮತ್ತು ಕೊಪ್ಪಳದಲ್ಲಿ ಶಾಂತಿ ಭಂಗವಾಗುತ್ತಿದೆ. ಇವರನ್ನು ಕಾನೂನು ಮೂಲಕ ಹದ್ದುಬಸ್ತಿನಲ್ಲಿ ಇಡಬೇಕು ಎಂದು ಜ್ಯೋತಿ ಒತ್ತಾಯಿಸಿದ್ದಾರೆ.

# ಉಚಿತ ಕಂಪ್ಯೂಟರ್ ತರಬೇತಿ

■ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ಜ್ಯೂನಿಯರ್ ಸಾಫ್ಟ್‌ವೇರ್ ಡೆವಲಪರ್ ಹಾಗೂ ಡೇಟಾ ಎಂಟ್ರಿ ಆಪರೇಟರ್ ಕೋರ್ಸ್‌ಗಳಿಗೆ ಉಚಿತ ತರಬೇತಿಯನ್ನು ಪ್ರಾರಂಭಿಸಿದೆ.

ಕನಿಷ್ಠ 10ನೇ ತರಗತಿ ಪಾಸಾಗಿರುವ, 18ರಿಂದ 35 ವರ್ಷ ವಯಸ್ಸಿನೊಳಗಿರುವ ಕನ್ನಡ ಮತ್ತು ಇಂಗ್ಲೀಷ್ ಓದಲು-ಬರೆಯಲು ಬರುವ ನಿರುದ್ಯೋಗಿಗಳು ತರಬೇತಿಗೆ ಅರ್ಹರಾಗಿರುತ್ತಾರೆ. ಹೆಸರು ನೋಂದಣಿಗಾಗಿ ತಮ್ಮ ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಪಾಸ್‌ಪೋರ್ಟ್ ಅಳತೆಯ ಫೋಟೊ, ಜನ್ಮ ದಿನಾಂಕ ನಮೂದಾಗಿರುವ 10ನೇ ತರಗತಿ ಪಾಸಾಗಿರುವ ಮಾರ್ಕ್ಸ್ ಕಾರ್ಡ್ ಇವುಗಳನ್ನು ತರಬೇಕು.

ಐಟಿ ಐಟಿಇಸ್ (IT-ITe) ಸೆಕ್ಟರ್‌ದಲ್ಲಿನ ಜ್ಯೂನಿಯರ್ ಸಾಫ್ಟ್‌ವೇರ್ ಡೆವಲಪರ್ (Junior Software Developer) ಹಾಗೂ ಡೇಟಾ ಎಂಟ್ರಿ ಆಪರೇಟರ್ (Domestic Data Entry Operator) ಉಚಿತವಾಗಿ ಕಲಿಸಿಕೊಡಲಾಗುವುದು. ಆಸಕ್ತರು ಕೂಡಲೇ ಹಸನ್ಮುಖಿ ಮಹಿಳಾ ಸಂಸ್ಥೆ (ಇನ್ಸ್ಟ್ರಾ ಟೆಕ್ನಾಲಜೀಸ್), ಮಾಡೆಲ್ ಹೈಸ್ಕೂಲ್ ಎದುರುಗಡೆ, ಚೇತನಾ ಕ್ಯಾಂಟೀನ್ ಸರ್ಕಲ್ ಹತ್ತೀರ, ಮಸಾರಿ, ಗದಗ ಕಛೇರಿಗೆ, ಹೆಚ್ಚಿನ ಮಾಹಿತಿಗಾಗಿ 7619531919, 7624863543 ಸಂಪರ್ಕಿಸಬಹುದಾಗಿ ಎಂದು ಪ್ರಕಟಣೆ ತಿಳಿಸಿದೆ.

# ತ್ರಿಕೂಟೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ

ಗುಜರಾತ್‌ನ ಸೋಮನಾಥ ದೇವಾಲಯದ ಪುನರುತ್ಥಾನದ ಸ್ಮರಣಾರ್ಥವಾಗಿ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿರುವ ಸೋಮನಾಥ ಸ್ವಾಭಿಮಾನ ಅಭಿಯಾನದ ಅಂಗವಾಗಿ ಶನಿವಾರ ನಗರದ ಐತಿಹಾಸಿಕ ತ್ರಿಕೂಟೇಶ್ವರ ದೇವಾಲಯದಲ್ಲಿ ಬಿಜೆಪಿ ಕಾರ್ಯಕರ್ತರು ವಿಶೇಷ ಪೂಜೆ ಸಲ್ಲಿಸಿದರು.




ಸೋಮನಾಥ ದೇವಾಲಯದ ಮೇಲೆ ಮುಹಮ್ಮದ ಘಜನಿ ದಾಳಿ ನಡೆಸಿ ಸಾವಿರ ವರ್ಷಗಳು ಪೂರೈಸಿವೆ. ಈ ಹಿಂದೆ ಡಾ. ಬಾಬು ರಾಜೇಂದ್ರ ಪ್ರಸಾದ್ ಅವರು ಜನತೆಯ ಸಹಕಾರದೊಂದಿಗೆ ದೇವಾಲಯವನ್ನು ಜೀರ್ಣೋದ್ಧಾರ ಮಾಡಿದ್ದರು. ಆ ಘಟನೆಗೆ 75 ವರ್ಷ ಸಂದ ಹಿನ್ನೆಲೆಯಲ್ಲಿ ದೇಶಾದ್ಯಂತ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಈ ಹಿನ್ನೆಲೆಯಲ್ಲಿ ಶನಿವಾರ ಬೆಳಿಗ್ಗೆ ನಗರದ ತ್ರಿಕೂಟೇಶ್ವರ ದೇವಾಲಯದಲ್ಲಿ ಬಿಜೆಪಿ ಕಾರ್ಯಕರ್ತರು ಶಿವನಿಗೆ ವಿಶೇಷ ಪೂಜೆ ಸಲ್ಲಿಸಿದರಲ್ಲದೆ, ಶಿವ ಪಂಚಾಕ್ಷರಿ ಮಂತ್ರವನ್ನು ಉಚ್ಚರಿಸುತ್ತಾ ಸಾಮೂಹಿಕ ಧ್ಯಾನ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಮಾತನಾಡಿ, ಸೋಮನಾಥ ದೇವಾಲಯವು ಭಾರತೀಯರ ಸ್ವಾಭಿಮಾನದ ಸಂಕೇತ. ಪ್ರಧಾನಿ ನರೇಂದ್ರ ಮೋದಿ ಅವರು ಸೋಮನಾಥನಲ್ಲಿ ಪೂಜೆ ಸಲ್ಲಿಸಿ ಈ ಅಭಿಯಾನಕ್ಕೆ ಚಾಲನೆ ನೀಡಿದ್ದು, ಅದರ ಅಂಗವಾಗಿ ಪ್ರತಿ ಮಂಡಲದಲ್ಲಿ ಶಿವನ ಆರಾಧನೆ ಮಾಡಲಾಗುತ್ತಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ಎಂ.ಎಂ. ಹಿರೇಮಠ, ಶ್ರೀಪತಿ ಉಡುಪಿ, ಸುರೇಶ ಮರಳಪ್ಪನವರ, ಶಂಕರ ಕಾಕಿ, ಸುರೇಶ ಚಿತ್ತರಗಿ ಮುಂತಾದವರು ಇದ್ದರು.

# ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟನೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸರಕಾರಿ ನೌಕರರ ಸಂಘದ ವತಿಯಿಂದ ಲೆದರ್ ಬಾಲ್ ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಿರುವುದು ಖುಷಿಯ ಸಂಗತಿ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ಶನಿವಾರ ನಗರದ ಆದರ್ಶ ಶಿಕ್ಷಣ ಸಮಿತಿ ಕಾಲೇಜು ಮೈದಾನದಲ್ಲಿ ಗದಗ ಜಿಲ್ಲಾ ಸರಕಾರಿ ನೌಕರರ ಸಂಘದಿಂದ ನಡೆದ ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಲಾಗುತ್ತದೆ. ಆದರೆ ಸರಕಾರಿ ನೌಕರರ ಸಂಘ ಲೆದರ್ ಬಾಲ್ ಕ್ರಿಕೆಟ್ ಟೂರ್ನಿ ಆಯೋಜಿಸಿದ್ದು ಶ್ಲಾಘನೀಯ. ಲೆದರ್ ಬಾಲ್ ಟೂರ್ನಿ ಆಯೋಜಿಸುವುದು ಸುಲಭ. ಆದರೆ ಆಡುವುದು ಕಷ್ಟ. ಅಂಥ ಸವಾಲಿನ ಕ್ರೀಡೆಯಲ್ಲಿ ಸರಕಾರಿ ನೌಕರರು ಭಾಗವಹಿಸಿರುವುದು ಶ್ಲಾಘನೀಯ ಎಂದರು.



ಸರಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ರವಿ ಗುಂಜೀಕರ್ ಮಾತನಾಡಿ, ಸರಕಾರಿ ನೌಕರರ ಸಂಘವು ನೌಕರರ ಒತ್ತಡವನ್ನು ನಿವಾರಿಸುವ ನಿಟ್ಟಿನಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ನೌಕರರ ಮನೋಲ್ಲಾಸಕ್ಕಾಗಿ ಇಂಥಹ ಕಾರ್ಯಕ್ರಮ ರೂಪಿಸಿರುವ ಕ್ರಿಯಾಶೀಲ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಅಭಿನಂದನಾರ್ಹರು.

ಗದಗ ಜಿಲ್ಲೆಯ ತಂಡ ಉತ್ತಮ ಪ್ರದರ್ಶನ ನೀಡಿ, ರಾಜ್ಯಮಟ್ಟದಲ್ಲಿ ಯಶಸ್ಸು ಸಾಧಿಸಲಿ ಎಂದು ಹಾರೈಸಿದರು

ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಡಿ.ಎಸ್. ತಳವಾರ, ಸಿದ್ದಣ್ಣ ಲಿಂಗದಾಳ, ಡಾ. ಎಸ್.ಎಸ್. ನೀಲಗುಂದ, ಡಾ. ಶರಣು ಗೋಗೇರಿ, ಶಿವಸಂಗಮ ಗ್ರುಪ್‌ನ ಪಲ್ಲೇದ ಹಾಗೂ ಸಂಘದ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

































VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka